ಕನ್ನಡ ದಿನಪತ್ರಿಕೆ
15 ಮಾರ್ಚ್ । ಶುಕ್ರವಾರ
15 MARCH 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 24 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ರಾಜ್ಯಸಭಾ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದ ಸುಧಾ ಮೂರ್ತಿ

ದೆಹಲಿ: ಇಂಜಿನಿಯರ್, ಸಮಾಜ ಸೇವಕಿ, ಲೇಖಕಿ ಸುಧಾ ಮೂರ್ತಿ ಅವರು ಗುರುವಾರ ರಾಜ್ಯಸಭಾ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಈ ಸಮಾರಂಭಕ್ಕೆ ಸುಧಾ ಮೂರ್ತಿ ಪತಿ ಎನ್‌ಆರ್ ನಾರಾಯಣ ಮೂರ್ತಿ ಕೂಡಾ ಉಪಸ್ಥಿತರಾಗಿದ್ದರು. ರಾಜ್ಯಸಭಾ ಅಧ್ಯಕ್ಷ ಜಗದೀಪ್ ಧನ್ಖರ್ ಅವರು ಸಂಸತ್ ಭವನದ ತಮ್ಮ ಚೇಂಬರ್‌ನಲ್ಲಿ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ಸಭಾನಾಯಕ ಪಿಯೂಷ್ ಗೋಯಲ್ ಕೂಡ ಉಪಸ್ಥಿತ–ರಿದ್ದರು.73ರ ಹರೆಯದ ಸುಧಾ ಮೂರ್ತಿ, ಇನ್ಫೋಸಿಸ್ ಫೌಂಡೇಶನ್‌ನ ಮಾಜಿ ಅಧ್ಯಕ್ಷೆ,ಲೇಖಕಿ ಕಳೆದ ಶುಕ್ರವಾರ ಅಂತಾರಾಷ್ಟ್ರೀಯ ಮಹಿಳಾ ದಿನದಂದು ರಾಜ್ಯಸಭೆಗೆ ನಾಮನಿರ್ದೇಶನಗೊಂಡರು.

ಸುಧಾ ಮೂರ್ತಿ ಕನ್ನಡ ಮತ್ತು ಇಂಗ್ಲಿಷ್ ಸಾಹಿತ್ಯಕ್ಕೆ ನೀಡಿದ ಕೊಡುಗೆಗಾಗಿ ಹೆಸರುವಾಸಿಯಾಗಿದ್ದಾರೆ. ಇವರು ಸಾಹಿತ್ಯ ಅಕಾಡೆಮಿ ಬಾಲ ಸಾಹಿತ್ಯ ಪುರಸ್ಕಾರ, ಪದ್ಮಶ್ರೀ (2006) ಮತ್ತು ಪದ್ಮಭೂಷಣ (2023) ಪುರಸ್ಕೃತರಾಗಿದ್ದಾರೆ.

ಎಲ್ಲಾ ಸಹಕಾರ ಸಂಘ–ಬ್ಯಾಂಕ್‌ಗಳ ಚುನಾವಣೆ ಮುಂದೂಡಿಕೆ

ಬೆಂಗಳೂರು: ರಾಜ್ಯದಲ್ಲಿರುವ ಆಡಳಿತ ಮಂಡಳಿ ಅವಧಿ ಮುಕ್ತಾಯಗೊಂಡಿರುವ/ ಮುಕ್ತಾಯಗೊಳ್ಳಲಿರುವ ಸಹಕಾರ ಸಂಘಗಳು/ ಸಹಕಾರ ಬ್ಯಾಂಕುಗಳ (ಪ್ರಾಥಮಿಕ, ಮಾಧ್ಯಮಿಕ /ಒಕ್ಕೂಟಗಳ (ಫೆಡರಲ್ ಸಂಸ್ಥೆ) ಮತ್ತು ಅಪೆಕ್ಸ್ ಸಹಕಾರ ಸಂಘಗಳ) ಚುನಾವಣೆಗಳನ್ನು ಮುಂದೂಡಿ ಸರ್ಕಾರ ಆದೇಶ ಹೊರಡಿಸಿದೆ.

ಈ ಬಗ್ಗೆ ಸರ್ಕಾರದ ಜಂಟಿ ಕಾರ್ಯದರ್ಶಿಗಳು ಆದೇಶ ಹೊರಡಿಸಿದ್ದು, ಮುಂದಿನ ಆದೇಶದವರೆಗೆ ಚುನಾವಣೆಗಳನ್ನು ಮುಂದೂಡಿ ಹಾಲಿ ಇರುವ ಆಡಳಿತ ಮಂಡಳಿ ಹಾಗೂ ಪದಾಧಿಕಾರಿಗಳ ಅವಧಿಯನ್ನು ಮುಂದುವರಿಸಿ ಆದೇಶ ಹೊರಡಿಸಿದೆ. ಈಗಾಗಲೇ ಚುನಾವಣೆ ವೇಳಾಪಟ್ಟಿ ಹೊರಡಿಸಿ, ಚುನಾವಣೆ ಪ್ರಕ್ರಿಯೆ ಜಾರಿಯಲ್ಲಿದ್ದಲ್ಲಿ ಅದನ್ನು ಸಹ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಈಗಾಗಲೇ ಘನ ನ್ಯಾಯಾಲಯಗಳ ಆದ–ೇಶದಂತೆ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗಿದ್ದಲ್ಲಿ/ ಪ್ರಾರಂಭವಾಗಬೇಕಿದ್ದಲ್ಲಿ ಈ ಆದೇಶ ಕುರಿತು ಮಾನ್ಯ ಘನ ನ್ಯಾಯಾಲಯದ ಗಮನಕ್ಕೆ ತಂದು ಘನ ನ್ಯಾಯಾಲಯದ ಆದೇಶದಂತೆ ಕ್ರಮವಿಡತಕ್ಕದ್ದು ಎಂದು ಸರ್ಕಾರ ಆದೇಶ ಹೊರಡಿಸಿದೆ.

ಅತಂತ್ರ ಸ್ಥಿತಿಯಲ್ಲಿ ಸುಮಲತಾ ಅಂಬರೀಶ್

ಮಂಡ್ಯ: ಮಂಡ್ಯ ಲೋಕಸಭಾ ಕ್ಷೇತ್ರ ಬಹುತೇಕ ಜೆಡಿಎಸ್ ಪಾಲಾಗಿದ್ದು, ಪಕ್ಷೇತರ ಸಂಸದೆ ಸುಮಲತಾ ಅಂಬರೀಶ್ ರಾಜ–ಕೀಯ ಸ್ಥಿತಿ ಅತಂತ್ರವಾಗಿದೆ. ಮೈತ್ರಿ ಹಿನ್ನೆಲೆ ಬಿಜೆಪಿಯು ಮಂಡ್ಯ ಕ್ಷೇತ್ರವನ್ನು ಜೆಡಿಎಸ್ಗೆ ಬಿಟ್ಟುಕೊಡಲು ತೀರ್ಮಾನಿಸಿದ್ದು, ಇದೇ ಕ್ಷೇತ್ರವನ್ನು ಬಿಜೆಪಿಯೇ ಉಳಿಸಿಕೊಳ್ಳಬೇಕೆಂದು ಸುಮಲತಾ ಆಶಿಸಿದ್ದರು. ಬಿಜೆಪಿ ಸುಮಲತಾ ಅಂಬ–ರೀಶ್ ಅವರನ್ನು ಬೆಂಗಳೂರು ಉತ್ತರ & ಮೈಸೂರು ಕ್ಷೇತ್ರದಿಂದ ಕಣಕ್ಕಿಳಿಸಲು ಚಿಂತನೆ ನಡೆಸಿತ್ತು. ಆದರೆ ನಿನ್ನೆ ಆ ಎರಡು ಕ್ಷೇತ್ರಗಳಿಗೂ ಅಭ್ಯರ್ಥಿಗಳ ಘೋಷಣೆಯಾಗಿದೆ. ಹಾಗಾಗಿ ಸುಮಲತಾ ನಡೆ ಬಗ್ಗೆ ಕುತೂಹಲ ಮೂಡಿದೆ. ಮಂಡ್ಯ ಕ್ಷೇತ್ರವನ್ನು ನಮಗೆ ನೀಡದಿದ್ದರೆ ಮೈತ್ರಿಗೆ ಅಥ–ರ್ಥವೇ ಇರುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಬಿಜೆಪಿ ನಾಯಕರಿಗೆ ಹೇಳಿದ್ದರು. ಹೀಗಾಗಿ ಈ ಕ್ಷೇತ್ರವನ್ನು ಜೆಡಿಎಸ್ಗೆ ಬಿಟ್ಟುಕೊಡಲು ಬಿಜೆಪಿ ತೀರ್ಮಾನಿಸಿದ್ದು, ಈ ಹಿನ್ನೆಲೆಯಲ್ಲಿ ಸುಮಲತಾ ರಾಜ–ಕೀಯ ನಡೆ ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ. ಒಂದು ವೇಳೆ ಬಿಜೆಪಿಯಿಂದ ಟಿಕೆಟ್ ಸಿಗದಿದ್ದರೆ ಸುಮಲತಾ ಅಂಬ–ರೀಶ್ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯಲಿದ್ದಾರೆಯೇ ಇಲ್ಲವೇ ಸ್ಪರ್ಧೆಯಿಂದ ಹಿಂದೆ ಸರಿಯಲಿದ್ದಾರೆಯೇ ಎಂಬುದು ಕಾದು ನೋಡಬೇಕಿದೆ.

ಕಾವೇರಿ ನೀರಿನ ಸಮಸ್ಯೆಯನ್ನು ಸಮರ್ಥವಾಗಿ ನಿಭಾಯಿಸುತ್ತಿರುವ ಸರ್ಕಾರದ ಬಗ್ಗೆ ಬಿಜೆಪಿಗೆ ಅಸೂಯೆ

ಬೆಂಗಳೂರು: ರಾಜ್ಯದಲ್ಲಿ ಭೀಕರ ಬರಗಾಲ ಮತ್ತು ನೀರಿನ ಸಮಸ್ಯೆ ಇರುವ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರ ತಮಿಳುನಾಡಿಗೆ ನೀರು ಬಿಡುತ್ತಿದೆ ಎಂದು ಬಿಜೆಪಿ ಸುಳ್ಳು ಹೇಳುತ್ತಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗುರುವಾರ ವಾಗ್ದಾಳಿ ನಡೆಸಿದರು.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪಕ್ಷಕ್ಕೆ ಬೇರೆ ಕೆಲಸವಿಲ್ಲ. ಇದು ಕೇವಲ ರಾಜಕೀಯ ಆಟವಾಗಿದೆ. ಬರ ಮತ್ತು ನೀರಿನ ಸಮಸ್ಯೆಗೆ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿ ಪರಿಹಾರ ಕಂಡುಕೊಂಡಿರುವುದಕ್ಕೆ ಬಿಜೆಪಿ ಅಸೂಯೆ ಪಡುತ್ತಿದೆ. ನ್ಯಾಯಾಲಯದ ಆದೇಶ ನಮ್ಮ ವಿರುದ್ಧ ಬಂದಾಗಲೂ ಕಾವೇರಿ ನೀರು ನಿರ್ವಹಣೆಗೆ ಸಂಬಂಧಿಸಿದಂತೆ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲಾಗಿದೆ. ಇದನ್ನು ಸಹಿಸದ ಬಿಜೆಪಿಯವರು ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ ಎಂದು ದೂರಿದರು.

ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಿದ್ದೇವೆ. ನಗರದಲ್ಲಿ 7,000 ಬೋರ್‌ವೆಲ್‌ಗಳು ಬತ್ತಿ ಹೋಗಿದ್ದರೂ, ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಅಧಿಕಾ–ರಿಗಳು ತಮ್ಮ ಕೈಲಾದ ಕೆಲಸ ಮಾಡುತ್ತಿದ್ದಾರೆ. ನಾವು ನೀರಿನ ಮೂಲಗಳನ್ನು ಗುರುತಿಸಿದ್ದೇವೆ

ಮತ್ತು ಏನು ಮಾಡಬೇಕೋ ಅದನ್ನು ಮಾಡಲಾಗುತ್ತಿದೆ. ಬಿಜೆಪಿ ಕೇವಲ ಬೊಗಳೆ ಬಿಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

'ಜಲಾಶಯಗಳಿಂದ ಹೊರ ಹರಿದಿರುವ ನೀರಿಗೂ ತಮಿಳುನಾಡಿಗೂ ಯಾವುದೇ ಸಂಬಂಧವಿಲ್ಲ. ಅವರು ನೀರು ಬಿಡುಗಡೆಗೆ ಬೇಡಿಕೆ ಇಟ್ಟಿದ್ದಾರಾ? ಈ ಹೊತ್ತಿನಲ್ಲಿ ತಮಿಳುನಾಡಿಗೆ ನೀರು ಬಿಡುವ ಹುಚ್ಚು ನಮಗಿದೆಯೇ? ಅವರಿಗೆ ನೀರು ಬಿಡಲು ನಮ್ಮಲ್ಲಿ ನೀರಿಲ್ಲ. ಬೆಂಗಳೂರು ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡುವುದೇ ನಮ್ಮ ಗುರಿ ಎಂದು ಹೇಳಿದರು.

ನಮ್ಮ ರೈತರೂ ನೀರು ಕೇಳಿಲ್ಲ. ರೈತರಿಗೆ ಕೊಡಬೇಕಾಗಿದ್ದ ನೀರನ್ನು ಈಗ ಯಾರಿಗೂ ಬಿಡುತ್ತಿಲ್ಲ. ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಮೇಕೆದಾಟು ಪಾದಯಾತ್ರೆ ಕೈಗೊಂಡಿದ್ದೆ ಎಂದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ ಬುಧವಾರ ತಮಿಳುನಾಡಿಗೆ ನೀರು ಬಿಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

'ಸಿದ್ದರಾಮಯ್ಯನವರ ಸುಳ್ಳುಗಳು ಮುಖ್ಯಮಂತ್ರಿ ಕುರ್ಚಿಗೆ ಅವಮಾನಕರ'. ಕರ್ನಾಟಕದ ಕಾಂಗ್ರೆಸ್ ಸರ್ಕಾರ ಮೌನವಾಗಿ ತಮಿಳುನಾಡಿಗೆ ಕಾವೇರಿ ನೀರು ಬಿಡುತ್ತಿದೆ ಎಂಬುದಕ್ಕೆ ತಮಿಳುನಾಡಿನ ಅಣೆಕಟ್ಟುಗಳು ನೀರಿನಿಂದ ತುಂಬಿವೆ ಎಂಬ ವರದಿಗಳು ಸಾಕ್ಷಿಯಾಗಿವೆ ಎಂದು ಅವರು ಹೇಳಿದರು.

ಹಿಂದೆಂದೂ ಕಂಡರಿಯದ ನೀರಿನ ಸಮಸ್ಯೆಯಿಂದ ಬೆಂಗಳೂರಿನ ಜನರು ಸಂಕಷ್ಟದಲ್ಲಿದ್ದು, 900ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿರುವಾಗ ಸಿದ್ದರಾಮಯ್ಯ ಅವರು ತಮಿಳುನಾಡಿಗೆ ನೀರು ಬಿಡುವ ಮೂಲಕ ಕರ್ನಾಟಕದ ಜನತೆಗೆ ಮೋಸ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

8 ಹಾಲಿ ಸಂಸದರಿಗೆ ಬಿಗ್ ಶಾಕ್ ಕೊಟ್ಟ ಬಿಜೆಪಿ

ಬೆಂಗಳೂರು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿಗಳ 2ನೇ ಪಟ್ಟಿ ಪ್ರಕಟವಾಗಿದ್ದು, ರಾಜ್ಯದ ಒಟ್ಟು 8 ಹಾಲಿ ಸಂಸದರಿಗೆ ಬಿಜೆಪಿ ಟಿಕೆಟ್ ಕೈತಪ್ಪಿದೆ.

ಹಾಲಿ ಸಂಸದರಾದ ಡಿ.ವಿ.ಸದಾನಂದಗೌಡ, ಪ್ರತಾಪ್ ಸಿಂಹ, ಸಂಗಣ್ಣ ಕರಡಿ, ಶಿವಕುಮಾರ್ ಉದಾಸಿ, ಜಿ.ಎಸ್.ಬಸವರಾಜ್, ನಳೀನ್ ಕುಮಾರ್ ಕಟೀಲ್, ಶ್ರೀನಿವಾಸ್ ಪ್ರಸಾದ್, ದೇವೇಂದ್ರಪ್ಪ ಅವರಿಗೆ ಟಿಕೆಟ್ ಮಿಸ್ ಆಗಿದೆ. ಡಿ.ವಿ.ಸದಾನಂದಗೌಡ ಬದಲಿಗೆ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರಕ್ಕೆ ಶೋಭಾ ಕರಂದ್ಲಾಜೆಗೆ ಬಿಜೆಪಿ ಟಿಕೆಟ್ ನೀಡಲಾಗಿದೆ.

ಪ್ರತಾಪ್ ಸಿಂಹ ಬದಲಾಗಿ ಮೈಸೂರು–ಕೊಡಗು ಕ್ಷೇತ್ರಕ್ಕೆ ಯದುವೀರ್ ಒಡೆಯರ್, ನಳೀನ್ ಕುಮಾರ್ ಕಟೀಲ್ ಬದಲು ದಕ್ಷಿಣ ಕನ್ನಡ ಕ್ಷೇತ್ರಕ್ಕೆ ಬ್ರಿಜೇಶ್ ಚೌಟಾ, ದೇವೇಂದ್ರಪ್ಪ ಬದಲು ಬಳ್ಳಾರಿಯಿಂದ ಬಿ.ಶ್ರೀರಾಮುಲು, ಶಿವಕುಮಾರ್ ಉದಾಸಿ ಬದಲು ಹಾವೇರಿಯಿಂದ ಬಸವರಾಜ್ ಬೊಮ್ಮಾಯಿ, ಜಿ.ಎಸ್.ಬಸವರಾಜ್ ಬದಲು ತುಮಕೂರಿನಿಂದ ವಿ.ಸೋಮಣ್ಣ, ಸಂಗಣ್ಣ ಕರಡಿ ಬದಲು ಕೊಪ್ಪಳದಿಂದ ಡಾ.ಬಸವರಾಜ್ ಕ್ಯಾವಟರ್, ವಿ.ಶ್ರೀನಿವಾಸ್ ಪ್ರಸಾದ್ ಬದಲು ಚಾಮರಾಜನಗರದಿಂದ ಎಸ್ ಬಾಲರಾಜುಗೆ ಟಿಕೆಟ್ ನೀಡಲಾಗಿದೆ.

ಜೆಡಿಎಸ್ ಪಕ್ಷ ಸರಿಯಿಲ್ಲ ಎಂದು ಮಂಜುನಾಥ್ ಬಿಜೆಪಿ ಸೇರಿದ್ದಾರೆ: ಸಂಸದ ಡಿ.ಕೆ. ಸುರೇಶ್

ಬೆಂಗಳೂರು: ಬೆಂಗಳೂರು ಗ್ರಾಮಾಂತರ ಕ್ಷೇತ್ರಕ್ಕೆ ಬಿಜೆಪಿಯು ಜೈದೇವ್ ಆಸ್ಪತ್ರೆಯ ಮಾಜಿ ನಿರ್ದೇಶಕ ಡಾಕ್ಟರ್ ಮಂಜುನಾಥ್ ಅವರಿಗೆ ಟಿಕೆಟ್ ನೀಡಿರುವ ಹಿನ್ನೆಲೆಯಲ್ಲಿ ಸಂಸದ ಡಿಕೆ ಸುರೇಶ್ ಅವರು ಪ್ರತಿಕ್ರಿಯಿಸಿದ್ದು, ಜಾಣ ಅಳಿಯ ಜೆಡಿಎಸ್ ಪಕ್ಷ ಸರಿಯಿಲ್ಲ ಎಂದು ತೊರೆದು ಬಿಜೆಪಿ ಸೇರಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಾಕ್ಟರ್ ಮಂಜುನಾಥ್ ಗೆ ಬೆಂಗಳೂರು ಗ್ರಾಮಾಂತರ ಟಿಕೆಟ್ ನೀಡಿದ ಹಿನ್ನೆಲೆಯಲ್ಲಿ ನನಗೇನು ಅಚ್ಚರಿ ಇಲ್ಲ. ಇದು ಎಚ್ ಡಿ ದೇವೇಗೌಡರ ಕುಟುಂಬದ ಮತ್ತೊಂದು ಭಾಗ. ಬಿಜೆಪಿ ಅಭ್ಯರ್ಥಿ ನನಗೇನು ಅಚ್ಚರಿ ಇಲ್ಲ. ಜೆಡಿಎಸ್ ಪಕ್ಷ ಸರಿ ಇಲ್ಲ ಅಂತ ಅಳಿಯ ಬಿಜೆಪಿ ಸೇರಿದ್ದಾರೆ. ಜಾಣ ಅಳಿಯ ಜೆಡಿಎಸ್ ಪಕ್ಷ ಬಿಟ್ಟು ಬಿಜೆಪಿ ಸೇರಿದ್ದಾರೆ ಸಂಸದ ಡಿಕೆ ಸುರೇಶ್ ಹೇಳಿಕೆ ನೀಡಿದರು.

ಬೆಳಗಾವಿ ಟಿಕೆಟ್ ಹಂಚಿಕೆ ಬಗ್ಗೆ ವರಿಷ್ಠರು ನನ್ನ ಜತೆ ಚರ್ಚಿಸುತ್ತಿದ್ದಾರೆ: ಜಗದೀಶ ಶೆಟ್ಟರ್

ಹುಬ್ಬಳ್ಳಿ: 'ಬೆಳಗಾವಿ ಲೋಕಸಭಾ ಕ್ಷೇತ್ರದ ಟಿಕೆಟ್ ಹಂಚಿಕೆ ಬಗ್ಗೆ ಪಕ್ಷದ ವರಿಷ್ಠರು ನನ್ನ ಜೊತೆ ಚರ್ಚೆ ಮಾಡುತ್ತಿದ್ದಾರೆ. ಆದ–ರೆ, ನಾನಿನ್ನೂ ಯಾವುದೇ ನಿರ್ಧಾರ ಕೈಗೊಂಡಿಲ್ಲ. ಪಕ್ಷದ ವ–ರಿಷ್ಠರು ಹಾಗೂ ಬೆಳಗಾವಿಯ ಮುಖಂಡರ ಜೊತೆ ಚರ್ಚಿಸಿದ ನಂತರ ಅಂತಿಮ ತೀರ್ಮಾನ ಕೈಗೊಳ್ಳುತ್ತೇನೆ' ಎಂದು ಬಿಜೆಪಿ ಮುಖಂಡ ಜಗದೀಶ ಶೆಟ್ಟರ್ ಹೇಳಿದರು. ನಗರದಲ್ಲಿ ಗುರುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, 'ಇದಕ್ಕೂ ಮುಂಚೆ ಧಾರವಾಡ, ಹಾವೇರಿ ಕ್ಷೇತ್ರದ ಬಗ್ಗೆ ಚರ್ಚೆಯಾಗಿತ್ತು. ನಾನು ಆಸಕ್ತಿ ಹೊಂದಿದ್ದೆ ಎಂದು ವರಿಷ್ಠರ ಗಮನಕ್ಕೆ ತಂದಿದ್ದೆ. ಈಗ ಇವೆರಡೂ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದ್ದಾರೆ. ಅದರ ಬಗ್ಗೆ ಚರ್ಚಿಸಲ್ಲ' ಎಂದರು. ಪ್ರಧಾನಿ ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿಯನ್ನಾಗಿಸುವುದು ನಮ್ಮ ಗುರಿ. ಈ ಹಿನ್ನೆಲೆಯಲ್ಲಿ ಸ್ಥಳೀಯವಾಗಿ ಯಾರೇ ಅಭ್ಯರ್ಥಿಯಾದರೂ ಅವರ ಗೆಲುವಿಗೆ ಪ್ರಯತ್ನಿಸುವೆ. ಪ್ರಚಾರ ಮಾಡುವೆ ಎಂದು ಹೇಳಿದರು. ಪಕ್ಷಕ್ಕೆ ಮರು ಸೇರ್ಪಡೆಯಾಗುವ ಸಂದರ್ಭದಲ್ಲಿ ಬಿ.ಎಸ್. ಯಡಿಯೂರಪ್ಪ ಹಾಗೂ ಬಿ.ವೈ. ವಿಜಯೇಂದ್ರ ಅವರ ನಡೆದ ಚರ್ಚೆಯನ್ನು ಬಹಿರಂಗ ಪಡಿಸಲು ಸಾಧ್ಯವಿಲ್ಲ. ಬೆಳಗಾವಿಯಲ್ಲಿ 'ಗೋ ಬ್ಯಾಕ್ ಶೆಟ್ಟರ್' ಎಂಬ ಅಭಿಯಾನ ನಡೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, 'ಈ ರೀತಿಯ ಅಭಿಪ್ರಾಯವನ್ನು ಕೆಲವರು ಮಾತ್ರ ವ್ಯಕ್ತಪಡಿಸಿದ್ದಾರೆ. ವರಿಷ್ಠರು ಹೀಗೆ ಇರುವುದಿಲ್ಲ. ತುಮಕೂರಲ್ಲಿ ವಿ.ಸೋಮಣ್ಣ ವಿರುದ್ಧವೂ ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದರು. ಆದರೂ, ಪಕ್ಷದ ವರಿಷ್ಠರು ಸೋಮಣ್ಣ ಅವರಿಗೆ ಟಿಕೆಟ್ ನೀಡಿದ್ದಾರಲ್ಲವೇ' ಎಂದರು.

ಹೆಗಡೆ ಅಲ್ಲ, ಅವರಪ್ಪ ಬಂದರೂ ಸಂವಿಧಾನ ಬದಲಿಸಲು ಸಾಧ್ಯವಿಲ್ಲ: ರಾಜುಗೌಡ

ಯಾದಗಿರಿ: ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ಆಕ್ಟೀವ್ ಆಗಿರುವ ಉತ್ತರ ಕನ್ನಡ ಸಂಸದ ಅನಂತ್ ಕುಮಾರ್ ಹೆಗಡೆ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ್ದ ಸಂವಿಧಾನ ಬದಲಾವಣೆ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗಿದೆ. ಇದೇ ವಿಚಾರವಾಗಿ ಸ್ವಪಕ್ಷದ ಸಂಸದನ ವಿರುದ್ಧವೇ ಬಿಜೆಪಿ ಉಪಾಧ್ಯಕ್ಷ ರಾಜುಗೌಡ ಕಿಡಿಕಾರಿದ್ದಾರೆ.

ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಾಜುಗೌಡ, ಅನಂತ್ ಕುಮಾರ್ ಹೆಗಡೆ ಅಲ್ಲ, ಅವರಪ್ಪ ಬಂದರೂ ಸಂವಿಧಾನ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಅನಂತ್ ಕುಮಾರ್ ಹೆಗಡೆ ಈ ಹಿಂದೆ 2018ರಲ್ಲಿಯೂ ಇಂತದ್ದೇ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ ನಮ್ಮ ಪಕ್ಷಕ್ಕೆ ಪೂರ್ಣ ಬಹುಮತ ಬರೋದಕ್ಕೆ ಕಲ್ಲು ಹಾಕಿದ್ದರು. ಹಿಂದುತ್ವ, ಮೋದಿ ಗಾಳಿಯಲ್ಲಿ ಸಂಸದರಾಗುತ್ತಾರೆ. ಸಂಸದರಾಗಿ ನಾಲ್ಕು ವರ್ಷ ಮಾಯವಾಗ್ತಾರೆ. ಚುನಾವಣೆ ಸಂದರ್ಭದಲ್ಲಿ ಇಂತಹ ಹುಚ್ಚುಚ್ಚಾಗಿ ಹೇಳಿಕೆಗಳನ್ನು ಕೊಡುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಾಲ್ಕು ವರ್ಷ ಕಾಣೆಯಾಗಿ ಈಗ ಟಿಕೆಟ್ ಗಾಗಿ ಈ ರೀತಿ ಹೇಳಿಕೆಗಳನ್ನು ನೀಡುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಚುನಾವಣಾ ಆಯುಕ್ತರಾಗಿ ಸುಖ್ಬೀರ್ ಸಿಂಗ್ ಸಂಧು, ಜ್ಞಾನೇಶ್ ಕುಮಾರ್ ನೇಮಕ

ನವದೆಹಲಿ: ಸುಖಬೀರ್ ಸಿಂಗ್ ಸಂಧು ಮತ್ತು ಜ್ಞಾನೇಶ್ ಕುಮಾರ್ ಅವರನ್ನು ರಾಷ್ಟ್ರೀಯ ಚುನಾವಣಾ ಆಯೋಗದ ನೂತನ ಆಯುಕ್ತರನ್ನಾಗಿ ನೇಮಿಸಿ ಸರ್ಕಾರ ಆದ–ೇಶ ಹೊರಡಿಸಿದೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ರಾಷ್ಟ್ರೀಯ ಕೇರಳ ಹಾಗೂ ಪಂಜಾಬ್ ಮೂಲದ ಇಬ್ಬರು ಮಾಜಿ ಅಧಿಕಾರಿಗಳನ್ನು ಖಾಲಿ ಇರುವ ಹುದ್ದೆಗಳಿಗೆ ನೇಮಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಲೋಕಸಭೆ ವಿಪಕ್ಷ ನಾಯಕ ಅಧೀರ್ ರಂಜನ್ ಚೌಧರಿ, ಸಮಿತಿ ಮುಂದೆ ಒಟ್ಟು ಆರು ಹೆಸರುಗಳು ಬಂದಿದ್ದವು.

ಅವರಲ್ಲಿ ಸಂಧು ಮತ್ತು ಕುಮಾರ್ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ. ಆಯ್ಕೆ ಸಮಿತಿಯಲ್ಲಿ ಸುಪ್ರೀಂ ಕೋರ್ಟ್‌ನ ಮುಖ್ಯನ್ಯಾಯಮೂರ್ತಿ ಇರಬೇಕಿ

ರಾಷ್ಟ್ರಪತಿಗೆ ಒಂದು ರಾಷ್ಟ್ರ, ಒಂದು ಚುನಾವಣೆ ವರದಿ ಸಲ್ಲಿಸಿದ ರಾಮ್ನಾಥ್ ಕೋವಿಂದ್ ನೇತೃತ್ವದ ಸಮಿತಿ

ನವದೆಹಲಿ: ಮಾಜಿ ರಾಷ್ಟ್ರಪತಿ ರಾಮ್ನಾಥ್ ಕೋವಿಂದ್ ನೇತೃತ್ವದ ಉನ್ನತ ಮಟ್ಟದ ಸಮಿತಿ ಇಂದು ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತು ವರದಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಸಲ್ಲಿಸಿದ್ದಾರೆ. ಈ ಪರಿಕಲ್ಪನೆಯು ದೇಶಾದ್ಯಂತ ಏಕಕಾಲದಲ್ಲಿ ಮತದಾನವನ್ನು ನಡೆಸುವುದನ್ನು ಸೂಚಿಸುತ್ತದೆ. ಲೋಕಸಭೆ ಹಾಗೂ ಎಲ್ಲ ರಾಜ್ಯಗಳ ವಿಧಾನಸಭೆಗಳಿಗೂ ಏಕಕಾಲದಲ್ಲಿ ಚುನಾವಣೆ ನಡೆಸುವ ಪ್ರಸ್ತಾವನೆ ಇದೆ.

ಭಾರತದಲ್ಲಿ, ಸಂಸತ್ತಿನ ಸದಸ್ಯರನ್ನು ಆಯ್ಕೆ ಮಾಡಲು ಸಾರ್ವತ್ರಿಕ ಚುನಾವಣೆಗಳು ಮತ್ತು ರಾಜ್ಯ ವಿಧಾನಸಭೆ ಚುನಾವಣೆಗಳು ಹಾಲಿ

ಸರ್ಕಾರದ ಅವಧಿಯು ಅಂತ್ಯಗೊಂಡಾಗ ಅಥವಾ ಕೆಲವು ಕಾರಣಗಳಿಂದ ಅದು ವಿಸರ್ಜನೆಯಾದಾಗ ಪ್ರತ್ಯೇಕವಾಗಿ ನಡೆಯುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು ಬಹಳ ಹಿಂದಿನಿಂದಲೂ ಒಂದು ರಾಷ್ಟ್ರ, ಒಂದು ಚುನಾವಣೆಯ ಕಲ್ಪನೆಯನ್ನು ಪ್ರತಿಪಾದಿಸುತ್ತಿದ್ದಾರೆ.

ಕೋವಿಂದ್ ನೇತೃತ್ವದ ಸಮಿತಿಯ ಇತರ ಸದಸ್ಯರು–ಗೃಹ ಸಚಿವ ಅಮಿತ್ ಶಾ, ರಾಜ್ಯಸಭೆಯ ಮಾಜಿ ವಿರೋಧ ಪಕ್ಷದ ನಾಯಕ ಗುಲಾಂ ನಬಿ ಆಜಾದ್, ಮಾಜಿ ಹಣಕಾಸು ಆಯೋಗದ ಅಧ್ಯಕ್ಷ ಎನ್‌ಕೆ ಸಿಂಗ್, ಲೋಕಸಭೆಯ ಮಾಜಿ ಕಾರ್ಯದರ್ಶಿ ಸುಭಾಷ್ ಕಶ್ಯಪ್ ಮತ್ತು ಹಿರಿಯ ವಕೀಲ ಹರೀಶ್ ಸಾಳ್ವೆ ಆಗಿದ್ದಾರೆ.

ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯು ರಾಷ್ಟ್ರಪತಿ ಭವನದಲ್ಲಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿತು. ಕಳೆದ ಸೆಪ್ಟೆಂಬರ್‌ನಲ್ಲಿ ರಚಿತವಾದ ಸಮಿತಿಯು ಅಸ್ತಿತ್ವದಲ್ಲಿರುವ ಸಾಂವಿಧಾನಿಕ ಚೌಕಟ್ಟನ್ನು ಗಮನದಲ್ಲಿಟ್ಟುಕೊಂಡು ಲೋಕಸಭೆ, ರಾಜ್ಯ ವಿಧಾನ ಸಭೆಗಳು, ಪುರಸಭೆಗಳು ಮತ್ತು ಪಂಚಾಯತ್‌ಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವ ಸಾಧ್ಯತೆಗಳನ್ನು ಅನ್ವೇಷಿಸಲು ಮತ್ತು ಶಿಫಾರಸುಗಳನ್ನು ಮಾಡುವ ಕಾರ್ಯವನ್ನು ಮಾಡಲಾಗಿತ್ತು.

ಲೋಕಸಭೆಯಲ್ಲಿ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಅವರನ್ನು ಸಮಿತಿಯ ಸದಸ್ಯರನ್ನಾಗಿ ಮಾಡಲಾಗಿತ್ತು. ಆದರೆ ಅವರು ನಿರಾಕರಿಸಿದರು, ಸಮಿತಿಯನ್ನು ನೆಪಮಾತ್ರ ಎಂದು ಬಣ್ಣಿಸಿದರು. ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಸಮಿತಿಯ ವಿಶೇಷ ಆಹ್ವಾನಿತ ಸದಸ್ಯರಾಗಿದ್ದಾರೆ.

ವರದಿಯು 18,626 ಪುಟಗಳನ್ನು ಹೊಂದಿದೆ. 191 ದಿನಗಳ ಕಾಲ ತಜ್ಞರು, ಸಂಶೋಧನಾಕಾರರ ನಡುವೆ ಸಮಾಲೋಚನೆ ನಡೆಸಿ ಸಿದ್ಧಪಡಿಸಲಾಗಿದೆ. 15 ನೇ ಹಣಕಾಸು ಆಯೋಗದ ಅಧ್ಯಕ್ಷ ಎನ್‌ಕೆ ಸಿಂಗ್ ಮತ್ತು ಅಂತರರಾಷ್ಟ್ರೀಯ ಹಣಕಾಸು ನಿಧಿಯ ಪ್ರಾಚಿ ಮಿಶ್ರಾ ಅವರ ಏಕಕಾಲಿಕ ಚುನಾವಣೆಗಳ ಆರ್ಥಿಕ ಕಾರ್ಯಸಾಧ್ಯತೆಯ ಕುರಿತಾದ ವಿಚಾರವನ್ನು ವರದಿ ಒಳಗೊಂಡಿದೆ.

ತುಕಾಲಿ ಸಂತೋಷ್ ಕಾರು ಅಪಘಾತ; ಚಿಕಿತ್ಸೆ ಫಲಿಸದೆ ಆಟೋ ಚಾಲಕ ಸಾವು

ಬೆಂಗಳೂರು: ತುಕಾಲಿ ಸಂತೋಷ್ ಅವರು ಇತ್ತೀಚೆಗೆ ಹೊಸ ಕಾರು ಖರೀದಿಸಿದ್ದು ಸಾಕಷ್ಟು ಸುದ್ದಿ ಆಗಿತ್ತು. ಕನಸು ನನಸಾಯಿತು ಎಂದು ಹೇಳಿಕೊಂಡಿದ್ದರು. ಮಾರ್ಚ್ 13ರ ಸಂಜೆ ಈ ಕಾರು ಅಪಘಾತಕ್ಕೆ ಒಳಗಾಗಿತ್ತು. ಆಟೋ ಹಾಗೂ ತುಕಾಲಿ ಸಂತೋಷ್ ಕಾರಿನ ಮಧ್ಯೆ ಅಪಘಾತ ಸಂಭವಿಸಿತ್ತು. ತೀವ್ರವಾಗಿ ಗಾಯಗೊಂಡ ಆಟೋ ಚಾಲಕ ಜಗದೀಶ್ ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ, ಆ ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೇ ಅವರು ಮೃತಪಟ್ಟಿದ್ದಾರೆ.

ಘಟನೆ ನಡೆದಿದ್ದು ಎಲ್ಲಿ?: ತುಕಾಲಿ ಸಂತೋಷ್ ಅವರು ಹೊಳೆನರಸೀಪುರದವರು. ತುಕಾಲಿ ಸಂತೋಷ್ ಅವರು ತಮ್ಮ ಕಾರಿನಲ್ಲಿ ತುಮಕೂರು ಕಡೆಯಿಂದ ಕುಣಿಗಲ್ ಮಾರ್ಗವಾಗಿ ಹೊಳೆನರಸೀಪುರ ಕಡೆ ಹೋಗುತ್ತಿದ್ದರು. ಅದೇ ವೇಳೆ ಕುಣಿಗಲ್ನಿಂದ ಕುರುಡಿಹಳ್ಳಿಗೆ ಆಟೋ ತೆರಳುತ್ತಿತ್ತು. ತುಕಾಲಿ ಸಂತೋಷ್ ಕಾರಿನ ಬಲ ಭಾಗಕ್ಕೆ ಆಟೋ ಡಿಕ್ಕಿ ಹೊಡೆದಿದೆ. ಆಟೋ ಬಹುತೇಕ ನಜ್ಜುಗುಜ್ಜಾಗಿತ್ತು. ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಹೊನ್ನೇನಹಳ್ಳಿ ಬಳಿ ಈ ಅಪಘಾತ ನಡೆದಿದೆ.

ಆಸ್ಪತ್ರೆಗೆ ದಾಖಲು: ಗಾಯಗೊಂಡಿದ್ದ ಆಟೋ ಚಾಲಕ ಜಗದೀಶ್ ಅವರನ್ನು ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೇ ಅವರು ಇಂದು ಮುಂಜಾನೆ ಮೃತಪಟ್ಟಿದ್ದಾರೆ. ಜಗದೀಶ್ ಅವರಿಗೆ 40 ವರ್ಷ ವಯಸ್ಸಾಗಿತ್ತು. ಅವರ ಅಗಲುವಿಕೆ ಕುಟುಂಬಕ್ಕೆ ತೀವ್ರ ನೋವುಂಟು ಮಾಡಿದೆ.

ಹಣ ಹಂಚಿಕೆ ವಿಚಾರಕ್ಕೆ ತಂದೆಯನ್ನೇ ಕೊಂದ ಮಕ್ಕಳು

ಗದಗ: ಹಣ ಹಂಚಿಕೆ ವಿಚಾರಕ್ಕೆ ಗಲಾಟೆಯಾಗಿ ತಂದೆಯನ್ನೇ ಮಕ್ಕಳು ಕೊಲೆ ಮಾಡಿರುವ ಧಾರುಣ ಘಟನೆ ಗದಗ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಲಕ್ಕುಂಡಿ ಗ್ರಾಮದ ವಿವೇಕಾನಂದ ಕರಿಯಲ್ಲಪ್ಪನವರ್(52) ಮೃತ ದುರ್ದೈವಿ. ಮೊದಲ ಪತ್ನಿ ಕಸ್ತೂರಮ್ಮ ಪುತ್ರರಾದ ಪ್ರಕಾಶ್, ಮಲ್ಲೇಶ್ ಎಂಬುವವರು ಬೆಳಗ್ಗೆ ಮನೆಯಲ್ಲಿ ತಂದೆಯನ್ನ ಕೂಡಿ ಹಾಕಿ ರಾಡ್ನಿಂದ ಹಲ್ಲೆ ಮಾಡಿದ್ದರು. ತೀವ್ರ ಗಾಯಗೊಂಡಿದ್ದವಿವೇಕಾನಂದರನ್ನು ಆಸ್ಪತ್ರೆಗೆ ಸಾಗಿಸುವಾಗ ಮಾರ್ಗ ಮಧ್ಯೆಯೇ ಸಾವನ್ನಪ್ಪಿದ್ದಾರೆ.

ಘಟನೆ ವಿವರ: ಮೃತ ವಿವೇಕಾನಂದ ಕರಿಯಲ್ಲಪ್ಪನವರ್ ಅವರು ತಮ್ಮ 6 ಎಕರೆ ಜಮೀನಿನಲ್ಲಿ ಮೂರು ಎಕರೆಯನ್ನ ಮಾರಾಟ ಮಾಡಿದ್ದರು. ಜಮೀನು ಮಾರಾಟ ಮಾಡಿ ಬಂದಿದ್ದ 1.30 ಲಕ್ಷ ರೂಪಾಯಿ ಹಂಚಿಕೆ ವಿಚಾರಕ್ಕೆ ಗಲಾಟೆ ನಡೆದಿದೆ. ನಂತರ ಎರಡನೇ ಪತ್ನಿ ರೇಖಾ ಎಂಬುವವರು ಜಮೀನಿಗೆ ತೆರಳಿದ್ದಾಗ, ಮೊದಲ ಪತ್ನಿ ಕಸ್ತೂರಮ್ಮ ಪುತ್ರರು ಮನೆಗೆ ಬಂದು ತಂದೆಯನ್ನ ಕೂಡಿ ಹಾಕಿ ಹಲ್ಲೆ ನಡೆಸಿದ್ದರು. ಇನ್ನು ಘಟನೆಗೆ ಹಣದ ಹಂಚಿಕೆ ವಿಚಾರವೇ ಕಾರಣ ಎಂದು ಎರಡನೇ ಪತ್ನಿ ರೇಖಾ ಅವರು ತಿಳಿಸಿದ್ದಾರೆ. ಈ ಘಟನೆ ಗದಗ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಕಾಫಿ ಎಸ್ಟೇಟ್ ನಲ್ಲಿ ಕಾಡಾನೆ ದಾಳಿಗೆ ಕಾರ್ಮಿಕ ಮಹಿಳೆ ಬಲಿ

ಮಡಿಕೇರಿ: ದಕ್ಷಿಣ ಕೊಡಗಿನ ಕಾಫಿ ಎಸ್ಟೇಟ್ ನಲ್ಲಿ ಬುಧವಾರ ಕಾಡಾನೆ ದಾಳಿಯಿಂದ ಕಾರ್ಮಿಕ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಪೊಳಲಿಬೆಟ್ಟ ಸಮೀಪದ ಅಬ್ಬೂರಿನಲ್ಲಿ ನಡೆದಿದೆ. ಮೃತ ಮಹಿಳೆಯನ್ನು ಅಸ್ಸಾಂ ಮೂಲದ ಎಸ್ಟೇಟ್ ಕಾರ್ಮಿಕರಾಗಿದ್ದ ಅಜಬಾನು(37) ಎಂದು ಗುರುತಿಸಲಾಗಿದೆ. ಅಜಬಾನು ಖಾಸಗಿ ಎಸ್ಟೇಟ್‌ನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಕಾಡಾನೆ ದಾಳಿ ನಡೆಸಿದೆ. ಸ್ಥಳದಲ್ಲಿದ್ದ ಇತರ ಎಸ್ಟೇಟ್ ಕಾರ್ಮಿಕರು ಕೂಡಲೇ ಅಜಬಾನುನನ್ನು ಪೊಲಿಬೆಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದಿದ್ದಾರೆ. ಗಂಭೀರವಾಗಿ ಗಾಯಗೊಂಡಿದ ಮಹಿಳೆ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಕಾಡಾನೆ ಹಾವಳಿ ನಿಯಂತ್ರಿಸುವಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದ ನಂತರ ವಿರಾಜಪೇಟೆ ವಿಭಾಗದ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಇದೇ ವೇಳೆ ವಿರಾಜಪೇಟೆಯಲ್ಲಿ ನಡೆದ ಸಾರ್ವಜನಿಕ ಕಾರ್ಯಕ್ರಮದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ, ಪೊಳಲಿಬೆಟ್ಟ ವ್ಯಾಪ್ತಿಯಲ್ಲಿನ ಐದು ಕಾಡಾನೆಗಳನ್ನು ಸೆರೆ ಹಿಡಿಯಲು ಕ್ರಮಕೈಗೊಳ್ಳುವಂತೆ ಅರಣ್ಯ ಇಲಾಖೆಗೆ ಸೂಚನೆ ನೀಡಿರುವುದಾಗಿ ತಿಳಿಸಿದ್ದಾರೆ.

ಬೆಂಗಳೂರು: ಹೋಟೆಲ್ ನಲ್ಲಿ ವಿದೇಶಿ ಮಹಿಳೆ ಶವವಾಗಿ ಪತ್ತೆ

ಬೆಂಗಳೂರು: ನಗರದ ಶೇಷಾದ್ರಿಪುರಂ ಪೊಲೀಸ್ ಠಾಣಾ ವ್ಯಾಪ್ತಿಯ ಬಿಡಿಎ ಕಚೇರಿ ಬಳಿಯ ತ್ರಿಸ್ಟಾರ್ ಹೋಟೆಲ್‌ನಲ್ಲಿ ಉಜ್ಬೇಕಿಸ್ತಾನ್ ಮೂಲದ 37 ವರ್ಷದ ಮಹಿಳೆ ನಿಗೂಢ ರೀತಿಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಸಂತ್ರಸ್ತೆ ಟೂರಿಸ್ಟ್ ವೀಸಾದಲ್ಲಿ ಬಂದಿದ್ದರು ಎನ್ನಲಾಗಿದೆ.

ನಾಲ್ಕು ದಿನಗಳ ಹಿಂದೆ ಹೋಟೆಲ್‌ನಲ್ಲಿ ರೂಂ ಬಾಡಿಗೆಗೆ ಪಡೆದಿದ್ದರು.

ಸಂತ್ರಸ್ತೆಯನ್ನು ಕತ್ತು ಹಿಸುಕಿ ಅಥವಾ ಉಸಿರುಗಟ್ಟಿಸಿ ಸಾಯಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಕೊಲ್ಲುವ ಮೊದಲು ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಸಾಧ್ಯತೆಯನ್ನು ಪೊಲೀಸರು ತಳ್ಳಿಹಾಕಿಲ್ಲ. ಸಂತ್ರಸ್ತೆಯನ್ನು ಜರೀನಾ ಎಂದು ಪೊಲೀಸರು ಗುರುತಿಸಿದ್ದಾರೆ.

ಬೆಳಗಾವಿ: ಕಿಡ್ನಿ ಆರೋಗ್ಯದ ಕುರಿತು ಜಾಗೃತಿ

ಬೆಳಗಾವಿ: ಕಿಡ್ನಿ ಆರೋಗ್ಯದ ಕುರಿತು ಸಾಮಾನ್ಯರಿಗೂ ತಿಳಿಯುವ ರೀತಿಯಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ನಡೆಯಬೇಕು. ಅವಶ್ಯವಿರುವ ವೈದ್ಯಕೀಯ ಸೌಲಭ್ಯ, ಅಂಗಾಂಗದಾನದ ಕಾರ್ಯ ಹಾಗೂ ಕಸಿ(ಟ್ರಾನ್ಸಪ್ಲ್ಯಾಂಟ) ಶಸ್ತ್ರಚಿಕಿತ್ಸೆ ನೆರವೇರಿಸುವಲ್ಲಿ ಇನ್ನೂ ಹೆಚ್ಚಾಗಿ ಕಾರ್ಯಪ್ರವೃತ್ತರಾಗಬೇಕು. ಕಿಡ್ನಿ ಹಾಳಾದರೆ ಡಯಾಲಿಸಿಸ್ ಅಥವಾ ಕಸಿ ಮಾಡುವದೊಂದೆ ಪರಿಹಾರ ಎಂದು ಕೆಎಲ್ಇ ಅಕಾಡೆಮಿ ಆಫ್ ಹೈಯರ ಎಜ್ಯುಕೇಶನ್ ಆ್ಯಂಡ ರಿಸರ್ಚ(ಕಾಹೆರ)ನ ಉಪಕುಲಪತಿ ಡಾ. (ಪ್ರೊ) ನಿತಿನ ಗಂಗಾನೆ ಅವರಿಂದಿಲ್ಲಿ ಎಚ್ಚರಿಕೆ ನೀಡಿದರು.

ಕೆಎಲ್ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದ ನೆಫ್ರೊಲಾಜಿ ವಿಭಾಗವು ಏರ್ಪಡಿಸಲಾಗಿದ್ದ ವಿಶ್ವ

ಮೂತ್ರಪಿಂಡ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಿಡ್ನಿ ಹಾಳಾದರೆ ಡಯಾಲಿಸಿಸ್ ಅಥವಾ ಕಸಿ ಮಾಡುವದೊಂದೆ ಪರಿಹಾರ. ಅದಕ್ಕಾಗಿ ಇನ್ನೂ ಹೆಚ್ಚಿನ ಸಂಶೋಧನೆಗಳು ನಡೆದು ಕಿಡ್ನಿ ರೋಗಿಗಳ ತೊಂದರೆಯನ್ನು ತಪ್ಪಿಸಲು ಪ್ರಯತ್ನಿಸಬೇಕು. ರಕ್ತದೊತ್ತಡ, ಮಧುಮೇಹ, ಮೂತ್ರಪಿಂಡದಲ್ಲಿನ ಹರಳು ಹಾಗೂ ಮೂತ್ರನಾಳದ ಸೋಂಕು ತಗುಲದಂತೆ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. ಕರ್ನಲ್ ಎಂ ದಯಾನಂದ ಅವರು ಮಾತನಾಡಿ, ಉತ್ತರ ಕರ್ನಾಟಕದಲ್ಲಿಯೇ ಎಲ್ಲ ಅಂಗಾಂಗ ಕಸಿ ಮಾಡುವ ಕೇಂದ್ರವಾಗಿ ಗುರುತಿಸಿಕೊಂಡಿರುವ ಕೆಎಲ್ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯು ತಂತ್ರಜ್ಞಾನ ಬದಲಾದಂತೆ ವೈದ್ಯಕೀಯ ವ್ಯವಸ್ಥೆಯನ್ನು ಜನರಿಗೆ ತಲುಪಿಸಲಾಗುತ್ತಿದೆ. ಚಿಕ್ಕ ರಂಧ್ರ ಮೂಲಕ ಕಿಡ್ನಿ ಕಸಿ ಮಾಡುವ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. ಅತ್ಯಾಧುನಿಕ ವ್ಯವಸ್ಥೆಯನ್ನು ಕಲ್ಪಿಸಲು ಸದಾ ಒಂದು ಹೆಜ್ಜೆ ಮುಂದಿದೆ. ಕಿಡ್ನಿ ಕಸಿ ಮಾಡಿಸಿಕೊಂಡ ರೋಗಿಗಳಲ್ಲಿ ಹೆಚ್ಚಾಗಿ ಜಾಗೃತಿ ಮೂಡಿಸಿ. ಎಂದ ಅವರು, ರೋಗಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲು ಅತ್ಯಾಧುನಿಕ ಸೌಲಭ್ಯಗಳನ್ನುಳ್ಳ ಡಾಯಾಲಿಸಿಸ ಯಂತ್ರ ಹಾಗೂ ಕಿಡ್ನಿ ಸಂಬಂಧಿತ ಸಕಲ ಚಿಕಿತ್ಸಾ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಹಿರಿಯ ನೆಫ್ರಲಾಜಿಸ್ಟ ಡಾ. ಮಲ್ಲಿಕಾರ್ಜುನ ಕರಿಶೆಟ್ಟಿ(ಖಾನಪೇಟ) ಅವರು ಮಾತನಾಡಿ, ನಾಲಿಗೆ ರುಚಿ ನೋಡಿದರೆ ಕಿಡ್ನಿ ಹಾಳಾಗುವ ಸಮಯ ಅಧಿಕ. ಬಿಪಿ, ಕೊಲೆಸ್ಟರಾಲ್, ಡಯಾಬಿಟಿಸ್ ಅನ್ನು ನಿಯಂತ್ರಣದಲ್ಲಿಡಿ, ವೈದ್ಯರ ಸಲಹೆ ಇಲ್ಲದೆ ಅನಾವಶ್ಯಕ ಔಷಧಿ ಸೇವನೆ ಬೇಡ, ಇದರಿಂದ ಕಿಡ್ನಿ ಹಾಳಾಗುವದನ್ನು ತಡೆಯಬಹುದು ಅಥವಾ ಮುಂದೂಡಬಹುದು. ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆಯಬೇಕು. ಸುಮಾರು 30 ವರ್ಷಗಳ ಕಾಲ ಡಯಾಲಿಸಿಸ್ ಮೇಲೆ ಇದ್ದು ಸಹಜವಾದ ಜೀವನ ನಡೆಸುತ್ತಿದ್ದಾರೆ ಎಂದರು. ತನ್ನ ಗಂಡನಿಗೆ ಕಿಡ್ನಿ ದಾನ ಮಾಡಿದ ಶ್ರೀಮತಿ ನೀಲಮ ಅಡಕೆ ತಮ್ಮ ಅನಿಸಿಕೆ ಹಂಚಿಕೊಂಡರು.

ಇದಕ್ಕೂ ಮೊದಲು ನಗರದ ಚೆನ್ನಮ್ಮ ವೃತ್ತದಿಂದ ಆಸ್ಪತ್ರೆಯವರೆಗೆ ಕಿಡ್ನಿ ಆರೋಗ್ಯದ ಕುರಿತು ಜಾಗೃತಿ ಜಾಥಾ ನಡೆಸಲಾಯಿತು. ಕಾಹೆರನ ಉಪಕುಲಪತಿ ಡಾ. ನಿತಿನ ಗಂಗಾನೆ ಅವರು ಜಾಥಾಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕ್ಯಾನ್ಸರ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. ಎಂ ವಿ ಜಾಲಿ, ಜೆಎನ್ ವೈದ್ಯಕೀಯ ಮಹಾವಿದ್ಯಾಲಯದ ಇನಚಾರ್ಜ ಪ್ರಾಚಾರ್ಯರಾದ ಡಾ. ರಾಜೇಶ ಪವಾರ, ಉಪಪ್ರಾಚಾರ್ಯರಾದ ಡಾ. ವಿ ಎಂ ಪಟ್ಟಣಶೆಟ್ಟಿ, ಡಾ. ರಿತೇಶ ವರ್ಣೆಕರ, ಡಾ. ರವಿ ಸಾರ್ವಿ, ಡಾ. ಎಸ್ ಐ ನೀಲಿ, ಡಾ. ಎಸ್ ಸಿ ಮೆಟಗುಡ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಪ್ರಮೋದ ಸೂಳಿಕೇರಿ ನಿರೂಪಿಸಿದರು.

ಬಸ್ ಡಿಕ್ಕಿ: ಮಾಲೀಕ ಸಾವು

ಉಡುಪಿ: ಗ್ಯಾರೇಜ್ ನಲ್ಲಿ ತನ್ನದೇ ಬಸ್ ಡಿಕ್ಕಿಯಾಗಿ ಮಾಲೀಕ ಮೃತಪಟ್ಟ ಘಟನೆ ಉಡುಪಿಯಲ್ಲಿ ನಡೆದಿದೆ. ದಯಾನಂದ ಶೆಟ್ಟಿ ಮೃತರು. ಬಸ್ ರಿಪೇರಿಗಾಗಿ ಅತ್ರಾಡಿಯ ಗ್ಯಾರೇಜ್ ಗೆ ಕೊಂಡೊಯ್ದ ಬಸ್ ನ ದುರಸ್ತಿ ಕಾರ್ಯ ನೋಡಲು ಮಾಲೀಕ ದಯಾನಂದ ಶೆಟ್ಟಿ ಅವರು ಗ್ಯಾರೇಜ್ ಗೆ ಬಂದಿದ್ದರು.

ದುರಸ್ತಿ ವೇಳೆ ಬಸ್ ಹಿಂದೆ ನಿಂತಿದ್ದ ದಯಾನಂದ ಅವರನ್ನು ಗಮನಿಸದೆ ಮೆಕ್ಯಾನಿಕ್ ಬಸ್ ನ ಎಂಜಿನ್ ಸ್ಟಾರ್ಟ್ ಮಾಡಿದ್ದಾನೆ. ಈ ವೇಳೆ ಬಸ್ ಹಿಂದೆ ಚಲಿಸಿದ್ದು, ದಯಾನಂದ ಅವರು ಬಸ್ ನ ಚಕ್ರಕ್ಕೆ ಸಿಲುಕಿ ಗಂಭೀರ ಗಾಯಗೊಂಡಿದ್ದಾರೆ.

ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಅಷ್ಟರಲ್ಲಾಗಲೇ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಈ ಕುರಿತು ಮಣಿಪಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಮಾ.22, 23 ರಂದು ಜಿಲ್ಲಾ ಸರಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ,ಬೆಳಗಾವಿ ಶಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಸರಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮಾರ್ಚ 22 ಹಾಗೂ 23 ರಂದು ಆಯೋಜಿಸಲಾಗಿದೆ.

ಈ ಹಿನ್ನಲೆಯಲ್ಲಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಬೆಳಗಾವಿ ಜಿಲ್ಲೆಯ ರಾಜ್ಯ ಸರಕಾರಿ ನೌಕರರು ಜಿಲ್ಲಾ ಕ್ರೀಡಾಂಗಣದಲ್ಲಿನ ಕ್ರೀಡಾ ಇಲಾಖೆ ಕಚೇರಿಯಲ್ಲಿ ಮಾರ್ಚ 18 ರೊಳಗಾಗಿ ತಮ್ಮ ಹೆಸರುಗಳನ್ನು ಉಪನಿರ್ದೇಶಕರು, ಯುವಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಇವರಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ಅದರಂತೆ

ಗಡಿ ಸಮಸ್ಯೆ; ಅಹವಾಲು ಸ್ವೀಕರಿಸಲು ಬೆಳಗಾವಿಯಲ್ಲಿ ಶೀಘ್ರವೇ ಗಡಿ ಆಯೋಗದ ಕಚೇರಿ ಸ್ಥಾಪನೆ: ಶಿವರಾಜ್ ಪಾಟೀಲ

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ಗಡಿ ಮತ್ತು ನದಿಗಳ ರಕ್ಷಣಾ ಆಯೋಗದ ಸಭೆ

ಬೆಳಗಾವಿ: ಸಾರ್ವಜನಿಕರು, ಕನ್ನಡಪರ ಸಂಘಟನೆಗಳ ಬೇಡಿಕೆಯಂತೆ ಗಡಿ ಹಾಗೂ ನದಿಗಳ ರಕ್ಷಣೆಗೆ ಸಂಬಂಧಿಸಿದಂತೆ ಸ್ಥಳೀಯ ಸಮಸ್ಯೆಗಳು ಮತ್ತು ಅಹವಾಲುಗಳನ್ನು ಸ್ವೀಕರಿಸಲು ಅನುಕೂಲವಾಗುವಂತೆ ಗಡಿ ಆಯೋಗದ ಕಚೇರಿಯೊಂದನ್ನು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸ್ಥಾಪಿಸಲಾಗುವುದು ಎಂದು ಕರ್ನಾಟಕ ಗಡಿ ಮತ್ತು ನದಿಗಳ ಸಂರಕ್ಷಣಾ ಆಯೋಗದ ಅಧ್ಯಕ್ಷರಾದ ಶಿವರಾಜ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ಗಡಿ ಮತ್ತು ನದಿಗಳ ರಕ್ಷಣಾ ಆಯೋಗದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಡಿ ಮತ್ತು ನದಿಗಳ ಆಯೋಗಕ್ಕೆ ಸುವರ್ಣ ವಿಧಾನಸೌಧದಲ್ಲಿ ಎರಡು ಕೊಠಡಿಗಳನ್ನು ನೀಡುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಸದರಿ ಆಯೋಗವನ್ನು ಪುನರ್ ರಚನೆಗೆ ಕ್ರಮ ಕೈಗೊಂಡು ಶೀಘ್ರವೇ ಸುವರ್ಣ ಸೌಧದಲ್ಲಿ ಕಚೇರಿ ಸ್ಥಾಪಿಸಿ ಕಚೇರಿಗೆ ಆಯೋಗದ ಸ್ಥಳೀಯ ಸದಸ್ಯರೊಬ್ಬರನ್ನು ನಿಯೋಜಿಸುವ ಮೂಲಕ ಸ್ಥಳೀಯ ಗಡಿ ಹಾಗೂ ನದಿಗಳ ರಕ್ಷಣೆಗೆ ಸಂಬಂಧಿಸಿದಂತೆ ಜನರ, ಸಂಘ – ಸಂಸ್ಥೆಗಳ ಅಹವಾಲುಗಳನ್ನು ಸ್ವೀಕರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಗಡಿ ಸಮಸ್ಯೆಗಳನ್ನು ಸಂವಿಧಾನಾತ್ಮಕವಾಗಿ ಬಗೆಹರಿಸುವ ನಿಟ್ಟಿನಲ್ಲಿ ಪ್ರಯತ್ನಗಳು ನಿರಂತರವಾಗಿ ನಡೆದಿರುತ್ತವೆ.

ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಪಟ್ಟಿಯಾದ ಬಳಿಕ ಸಮರ್ಥವಾಗಿ ವಾದ ಮಂಡನೆಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಗಡಿ ಸಮಸ್ಯೆಗಳನ್ನು ಸಂವಿಧಾನಾತ್ಮಕವಾಗಿ ಬಗೆಹರಿಸುವ ನಿಟ್ಟಿನಲ್ಲಿ ಪ್ರಯತ್ನಗಳು ನಿರಂತರವಾಗಿ ನಡೆದಿರುತ್ತವೆ. ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಪಟ್ಟಿಯಾದ ಬಳಿಕ ಸಮರ್ಥವಾಗಿ ವಾದ ಮಂಡನೆಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕಾನೂನಾತ್ಮಕ ಹಾಗೂ ರಾಜಕೀಯವಾಗಿ ಹೋರಾಟಕ್ಕೆ ಸಂಬಂಧಿಸಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳ ಸಲಹೆಗಳು ಮತ್ತು ಹಕ್ಕೊತ್ತಾಯಗಳನ್ನು ಸರ್ಕಾರದ ಗಮನಕ್ಕೆ



ತರುವ ಮೂಲಕ ರಚನಾತ್ಮಕ ಕಾರ್ಯಗಳನ್ನು ಹಮ್ಮಿಕೊಳ್ಳಲಾಗುವುದು. ಮಹಾರಾಷ್ಟ್ರ ಮಾದರಿಯಲ್ಲಿ ಗಡಿ ಸಚಿವರನ್ನು ನೇಮಕ ಮಾಡುವ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಶಿವರಾಜ್ ಪಾಟೀಲ ಭರವಸೆ ನೀಡಿದರು.

ನದಿಗಳು ಮತ್ತು ಗಡಿಗಳ ಸಮಸ್ಯೆ ಎದುರಾದಾಗ ಕಾನೂನಾತ್ಮಕವಾಗಿ ಯಾವ ರೀತಿಯಲ್ಲಿ ರಕ್ಷಣೆ ಮಾಡಬೇಕು ಎಂಬುದನ್ನು ಸರ್ಕಾರಕ್ಕೆ ಸಲಹೆ ರೂಪದಲ್ಲಿ ವರದಿ ನೀಡುವ ಕೆಲಸವನ್ನು ಆಯೋಗ ಮಾಡಲಿದೆ ಎಂದು ಶಿವರಾಜ ಪಾಟೀಲ ಹೇಳಿದರು. ಬೆಳಗಾವಿಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ರಾಜ್ಯೋತ್ಸವ ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಆಚರಿಸಲು ಸರ್ಕಾರದಿಂದ ಹೆಚ್ಚಿನ ಅನುದಾನ ದೊರಕಿಸಲು ಶಿಫಾರಸು ಮಾಡಲಾಗುವುದು ಎಂದು ಶಿವರಾಜ್ ಪಾಟೀಲ ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಕನ್ನಡ ಪರ ಹೊರಾಟಗಾರ ಮಹದೇವ ತಳವಾರ ಮಾತನಾಡಿ, ಮಹಾತ್ಮಾ ಫುಲೆ ಆರೋಗ್ಯ ಯೋಜನೆ ಅನುಷ್ಠಾನಕ್ಕಾಗಿ ಗಡಿಭಾಗದಲ್ಲಿ ಕಚೇರಿ ಆರಂಭಿಸಿರುವಾಗ ಸರ್ಕಾರದಿಂದ ಯಾವುದೇ ಕ್ರಮವಿಲ್ಲ. ಕನ್ನಡ ನಾಮಫಲಕ ಹಾಕಿಸಲು ಹೋರಾಟ ಆರಂಭಿಸಿದರೆ ಪ್ರಕರಣ ದಾಖಲಿಸುತ್ತಾರೆ. ಇನ್ನು ಕನ್ನಡ ಮಾಧ್ಯಮಗಳ ಶಾಲೆಗಳಲ್ಲಿ ಕೊಠಡಿ ಕೊರತೆಯಿದೆ. ಅಲ್ಲದೇ ಸ್ಥಳೀಯ ಕನ್ನಡಪರ, ರೈತಪರ ಸಂಘಟನೆಗಳ ಜತೆ ಚರ್ಚಿಸಿ ಗಡಿ ಆಯೋಗದ ಪುನರ್ ರಚನೆ ಮಾಡುವಂತೆ ಒತ್ತಾಯಿಸಿದರು.

ಹಿರಿಯ ಕನ್ನಡ ಹೋರಾಟಗಾರ ಅಶೋಕ ಚಂದರಗಿ ಮಾತನಾಡಿ, ಮಹಾತ್ಮಾ ಫುಲೆ ಆರೋಗ್ಯ ಯೋಜನೆಯನ್ನು ಗಡಿಭಾಗದ ಐದು ಜಿಲ್ಲೆಗಳಲ್ಲಿ ಮಹಾರಾಷ್ಟ್ರ ಸರ್ಕಾರ ಅನುಷ್ಠಾನ ಮಾಡುತ್ತಿದೆ.

ಬೆಳಗಾವಿಯಲ್ಲಿ ಸೇವಾ ಕೇಂದ್ರಗಳನ್ನು ಆರಂಭಿಸುವ ಮೂಲಕ ಆಟಾಟೋಪ ಹಾಗೂ ಕುತಂತ್ರಗಳನ್ನು ಮಾಡಲಾಗುತ್ತಿದೆ. ಇಷ್ಟೆಲ್ಲ ಬೆಳವಣಿಗೆ ಯಾದರೂ ಸರ್ಕಾರ ಅಥವಾ ಆಯೋಗದ ವತಿಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮತ್ತೋರ್ವ ಕನ್ನಡ ಹೋರಾಟಗಾರ ದೀಪಕ ಗುಡಗನಟ್ಟಿ ಮಾತನಾಡಿ, ಆಯೋಗದ ವತಿಯಿಂದ ಪ್ರತಿ ಮೂರು ತಿಂಗಳಿಗೊಮ್ಮೆ ನಿಯಮಿತವಾಗಿ ಸಭೆಗಳನ್ನು ನಡೆಸಿದರೆ ಗಡಿಭಾಗದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲು ಸಾಧ್ಯವಾಗುತ್ತದೆ. ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಕೆ ಮಾಡಲು ಕ್ರಮ ಕೈಗೊಳ್ಳಬೇಕು. ಪದೇ ಪದೆ ಗಡಿಭಾಗದಲ್ಲಿ ಭಾಷಾದ್ವೇಷ ಮೂಡಿಸುತ್ತಿರುವ ಎಂಇಎಸ್ ಹಾಗೂ ಶಿವಸೇನೆಯನ್ನು ರಾಜ್ಯದಲ್ಲಿ ನಿಷೇಧಿಸಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಆಯೋಗದ ಸದಸ್ಯರಾದ ದಿನಕರ ದೇಸಾಯಿ, ಎಸ್.ಎಂ.ಕುಲಕರ್ಣಿ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿ.ಪಂ. ಸಿಇಒ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಡಿಸಿಪಿ ರೋಹನ್ ಜಗದೀಶ್, ಮಹಾನಗರ ಪಾಲಿಕೆಯ ಆಯುಕ್ತರಾದ ಪಿ.ಎನ್.ಲೋಕೇಶ್, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ ಸೇರಿದಂತೆ ವಿವಿಧ ಕನ್ನಡಪರ ಸಂಘನೆಗಳ ಪದಾಧಿಕಾರಿಗಳು, ಕನ್ನಡ ಹೋರಾಟಗಾರರು ಉಪಸ್ಥಿತರಿದ್ದರು.

'ಕಲಾ ವಿಕಾಸ ಪುರಸ್ಕಾರ' ರಾಜ್ಯಪ್ರಶಸ್ತಿಗೆ ಅರ್ಜಿಆಹ್ವಾನ

ಬೆಳಗಾವಿ: ಕಲಾವಿದರ ಮತ್ತು ಕಲಾಪೋಷಕರ ಸಂಘಟನೆಯಾದ ಗದುಗಿನ ಕಲಾ ವಿಕಾಸ ಪರಿಷತ್ ಹಮ್ಮಿಕೊಂಡಿರುವ ಕಲಾ ವಿಕಾಸ ಉತ್ಸವ–2024 ಸಮಾರಂಭದಲ್ಲಿ ನೀಡುತ್ತಾಬಂದಿರುವ 24ನೇ ವರ್ಷದ ಪ್ರಶಸ್ತಿ, ಕಲಾ ವಿಕಾಸ ಪುರಸ್ಕಾರ ಪ್ರಶಸ್ತಿಗೆ ಶಾಸ್ತ್ರೀಯ ಸಂಗೀತ (ಗಾಯನ ವಾದನ, ಸುಗಮ ಸಂಗೀತ, ತತ್ವಪದ, ವಚನ ಗಾಯನ, ಜಾನಪದ ಸಂಗೀತ) ಕ್ಷೇತ್ರದಲ್ಲಿ ಮತ್ತುಶಾಸ್ತ್ರೀಯ ನೃತ್ಯ (ಭರತನಾಟ್ಯ, ಕಥಕ್, ಕುಚುಪುಡಿ, ಮೊದಲಾದ ನೃತ್ಯ) ಪ್ರಕಾರದಲ್ಲಿ ಸಾಧನೆ ಗೈದ ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದೆ.

ಈ ಪ್ರಶಸ್ತಿಯು ಗೌರವಧನ, ಪ್ರಶಸ್ತಿ ಫಲಕ, ನೆನಪಿನ ಕಾಣಿಕೆ, ಶಾಲು ಸತ್ಕಾರವನ್ನು ಒಳಗೊಂಡಿರುತ್ತದೆ.

ಆಸಕ್ತ ಕಲಾವಿದರುತಮ್ಮ ಸಂಪೂರ್ಣ ವಿವರ ಮತ್ತು ಕಲಾ ಪ್ರದರ್ಶನದ ವಿಡಿಯೋ ತುಣುಕುಗಳೊಂದಿಗೆ ಈ ವಾಟ್ಸಪ್ 9886717732 ನಂಬರಿಗೆ ಅಥವಾ kvpgadag74@gmail.com ಈ ಇಮೇಲ್ ಗೆ ಕಳಿಸಿಕೊಡಬಹುದಾಗಿದೆ.

ಪುರಸ್ಕಾರಕ್ಕೆ ಆಯ್ಕೆಯಾದ ಕಲಾವಿದರುತಮ್ಮ ಕಲಾ ಪ್ರದರ್ಶನ ನಡೆಸಿಕೊಡುವುದು ಕಡ್ಡಾಯವಾಗಿರುತ್ತದೆ. ಎಂದು ಕಲಾವಿಕಾಸ ಪರಿಷತ್ಅಧ್ಯಕ್ಷಸಿ.ಕೆ.ಹೆಚ್. ಶಾಸ್ತ್ರಿ (ಕಡಣಿ) ಇವರು ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿಕೊಂಡಿದ್ದಾರೆ.

ಸಂಸದ ಅನಂತ ಹೆಗಡೆ ಮೇಲೆ ಕ್ರಮ ಜರುಗಿಸಲು ಮುಧೋಳ ಕಾನಿಪದಿಂದ ಆಗ್ರಹ

ಮುಧೋಳ : ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾಧ್ಯಮದವರನ್ನು ನಾಯಿಗೆ ಹೋಲಿಸಿ ಹೀಯಾಳಿಸಿ, ಅವಮಾನಿಸಿದ ಹಾಗೂ ಸಂವಿಧಾನವನ್ನು ಬದಲಿಸುತ್ತೇವೆ ಎಂದು ಭಾರತೀಯ ಸಂವಿಧಾನಕ್ಕೆ ಅವಮಾನ ಮಾಡಿದ ಉತ್ತರ ಕನ್ನಡ ಸಂಸದ ಅನಂತಕುಮಾರ ಹೆಗಡೆಯವರ ಹೇಳಿಕೆ ಖಂಡಿಸಿ, ಕೂಡಲೇ ರಾಜ್ಯ ಸರ್ಕಾರ ಅವರ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಮುಧೋಳ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ರತ್ನಾಕರ ಶೆಟ್ಟಿಯವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ತಹಶೀಲದಾರ ವಿನೋದ ಹತ್ತಳ್ಳಿಯವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ವೆಂಕಟೇಶ ಗುಡೆಪ್ಪನವರ ಮಾತನಾಡಿ, ಸ್ವಾತಂತ್ರ್ಯ ಪೂರ್ವದಿಂದಲೂ ಪತ್ರಿಕಾ ಮಾಧ್ಯಮ ಜವಾಬ್ದಾರಿಯ ಸ್ಥಾನದಲ್ಲಿ ಅಂಕುಡೊಂಕುಗಳನ್ನು ತಿಳಿಸುವ ಹಾಗೂ ದೇಶದ ಆಗುಹೋಗುಗಳ ಸಮಗ್ರ ಸುದ್ದಿಗಳನ್ನು ಪ್ರಾಮಾಣಿಕವಾಗಿ ನೀಡುವ

ಮೂಲಕ ಕಾರ್ಯನಿರ್ವಹಿಸುತ್ತ ಬಂದಿದೆ. ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗಗಳ ಜೊತೆ ಪತ್ರಿಕಾರಂಗ ನಾಲ್ಕನೇ ಅಂಗವೆಂದು ಇಡೀ ದೇಶವೇ ಒಪ್ಪಿರುವಾಗ ಗೌರವಾನ್ವಿತ ಸ್ಥಾನವಾದ ಸಂಸದರಾಗಿ ಇಂತಹ ಕೀಳುಮಟ್ಟದಲ್ಲಿ ಪತ್ರಿಕಾ ಮಾಧ್ಯಮದವರುನ್ನು ನಾಯಿಗೆ ಹೋಲಿಸಿ ಪದೇ ಪದೇ ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆ ಎಂದು ಹೇಳಿಕೆ ನೀಡುವ ಮೂಲಕ ಅವಮಾನ ಮಾಡಿರುವ ಅವರಿಗೆ ತಕ್ಕ ಶಿಕ್ಷೆ ನೀಡುವವರೆಗೆ ನಾವು ನಿರಂತರ ಹೋರಾಟ ಮಾಡುವುದಾಗಿ ತಿಳಿಸಿದರು.

ಪ್ರಕಾ ಎಮ್.ಎಚ್.ನದಾಫ್ ಮಾತನಾಡಿ, ಕಾನಿಪ ಸಂಘದ ರಾಜ್ಯಾಧ್ಯಕ್ಷರ ಸೂಚನೆಯಂತೆ ಸಂಸದ ಅನಂತಕುಮಾರ ಹೆಗಡೆಯವರ ವಿರುದ್ಧ ಬೀದಿಗೆ ಇಳಿದು ನಾವು ಹೋರಾಟ ಮಾಡುವ ಪರಿಸ್ಥಿತಿ ಬಂದಿದೆ. ಮಾಧ್ಯಮದ ವಿರುದ್ಧ ಅವಮಾನಿಸುವ ಹೇಳಿಕೆ ನೀಡುವ ಯಾವುದೇ ವ್ಯಕ್ತಿಗಳಾಗಿದ್ದರೂ ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಗೌರವಾಧ್ಯಕ್ಷ ಅಶೋಕ ಕುಲಕರ್ಣಿ ಮಾತನಾಡಿ, ಅತ್ಯಂತ ಕೀಳುಮಟ್ಟದ ಶಬ್ದಗಳಿಂದ ಪತ್ರಿಕಾ ರಂಗವನ್ನು ಅವಮಾನಿಸಿ ನಿಂದಿಸಿದ ಉತ್ತರ ಕನ್ನಡ ಸಂಸದ ಅನಂತಕುಮಾರ ಹೆಗಡೆಯವರ ಮೇಲೆ ಅತ್ಯಂತ ಕಠಿಣ ಕ್ರಮ ಕೈಗೊಳ್ಳಬೇಕು. ಇಂತಹ ಘಟನೆಗಳು ಮರುಕಳಿಸಬಾರದು, ಒಂದು ಜವಾಬ್ದಾರಿಯುತ ಸ್ಥಾನದಲ್ಲಿ ಇರುವ ಯಾರೇ ಆದರೂ ಇಂತಹ ಬೇಜವಾಬ್ದಾರಿ ಹೇಳಿಕೆ ನೀಡದೇ, ತಮ್ಮ ಸ್ಥಾನಗಳ ಘನತೆ, ಗೌರವ ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕೆಂದು ಅವರು ಹೇಳಿದರು.

ಖಜಾಂಚಿ ಗಣೇಶ ಮೇತ್ರಿ ಮಾತನಾಡಿ, ಸಂವಿಧಾನದಿಂದಲೇ ಸಂಸದರಾಗಿ ಸಂವಿಧಾನದಲ್ಲಿ ವಾಕ್ ಸ್ವಾತಂತ್ರ್ಯ ಇದೆ ಎಂಬುದನ್ನೇ ದುರುಪಯೋಗ ಪಡಿಸಿಕೊಂಡು, ಸಂವಿಧಾನದ ವಿರೋಧಿ ಹೇಳಿಕೆ ನೀಡುತ್ತ, ಸಂವಿಧಾನ ಬದಲಾಯಿಸುತ್ತೇವೆ, ಸಂವಿಧಾನ ಬದಲಾಯಿಸುವುದಕ್ಕಾಗಿಯೇ ನಾವು ಅಧಿಕಾರಕ್ಕೆ ಬಂದಿದ್ದೇವೆ ಎಂದು ಅಸಂಬದ್ಧ ಹೇಳಿಕೆ ನೀಡುತ್ತ ಧರ್ಮ–ಜಾತಿಗಳ ನಡುವೆ ಸೌಹಾರ್ಧ ಕೆಡುವಂತಹ ಹೇಳಿಕೆ ನೀಡುವುದನ್ನು ಬಿಡಬೇಕು. ಹಾಗೂ ಸಮಾಜದಲ್ಲಿ ಅಶಾಂತಿ ಮೂಡಿಸಿ ಕೋಮುಗಲಭೆಗಳಿಗೆ ಪ್ರಚೋದನೆ ನೀಡುವ ಹೇಳಿಕೆ ನೀಡಿ ನಾಡಿನ ಶಾಂತಿ ಕದಡುತ್ತಿರುವ ಸಂಸದ ಅನಂತಕುಮಾರ ಹೆಗಡೆಯವರ ಮೇಲೆ ಸರ್ಕಾರ ಸೂಕ್ತ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ಮಹಾಂತೇಶ ಕರೆಹೊನ್ನ, ವಿಶ್ವನಾಥ ಮುನವಳ್ಳಿ, ಐ.ಎಮ್.ಸಾಲಗುಂದಿ, ಬಿ.ಕೆ.ರಾಮದುರ್ಗ, ಬಿ.ಎಚ್.ಬೀಳಗಿ, ಜಗದೀಶ ಜೀರಗಾಳ, ಮಲ್ಲಿಕಾರ್ಜುನ ಗೋವಿಂದಪೂರಮಠ, ಗೋವಿಂದಪ್ಪ ತಳವಾರ, ಎಲ್.ಬಿ.ಹಳ್ಳದ ಉಪಸ್ಥಿತರಿದ್ದರು.

ಇದಕ್ಕೂ ಮುಂಚೆ ನಗರದ ಕಾನಿಪ ಕಾರ್ಯಾಲಯದಿಂದ ಶಿವಾಜಿ ಸರ್ಕಲ್, ರನ್ನ ಸರ್ಕಲ್‌ಗಳ ಮೂಲಕ ಪ್ರತಿಭಟನಾ ಮೆರವಣಿಗೆಯ ಮೂಲಕ ತಹಶೀಲದಾರ ಕಚೇರಿಯವರೆಗೆ ತೆರಳಲಾಯಿತು.

ಯುಕೆಪಿ ಸಂತ್ರಸ್ತರ ನ್ಯಾಯಕ್ಕಾಗಿ ಆಮರಣ ಉಪವಾಸಕ್ಕೆ ಸಿದ್ಧ: ಗೋಲಶೆಟ್ಟಿ

ಮುಧೋಳ : ಕೃಷ್ಣಾ ಮೇಲ್ದಂಡೆ ಯೋಜನೆ ಸಂತ್ರಸ್ತರ ನ್ಯಾಯಕ್ಕಾಗಿ ಆಮರಣ ಉಪವಾಸ ಮಾಡಲು ಸಿದ್ಧ ಎಂದು ಉತ್ತರ ಕರ್ನಾಟಕ ಹೋರಾಟ ಸಮಿತಿಯ ನಾಗೇಶ ಗೋಲಶೆಟ್ಟಿ ಹೇಳಿದರು. ಯುಕೆಪಿ 3ನೇ ಹಂತದ ಹೋರಾಟ ಹಾಗೂ ವಿವಿಧ ಬೇಡಿಕೆಗಳಿಗಾಗಿ ತಾಲೂಕಿನ ಮಾಚಕನೂರಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಯುಕೆಪಿಯು ಸುಮಾರು ಆರು ದಶಕಗಳ ಹಿಂದಿನ ಯೋಜನೆಯಾಗಿದ್ದು ನೆನೆಗುದಿಗೆ ಬಿದ್ದಿದೆ. ಈ ಯೋಜನೆಗೆ ಭೂಮಿ ನೀಡಿದ ಸಂತ್ರಸ್ತರ ತ್ಯಾಗ ದೊಡ್ಡದು.ಆದರೆ ಸಂತ್ರಸ್ತರ ಬದುಕು ಯಾತನಾದಾಯಕವಾಗಿದೆ. ಉತ್ತರಕರ್ನಾಟಕ ಭಾಗದಲ್ಲಿರುವ ಈ ಯೋಜನೆ ದೇಶದ ಅತೀ ದೊಡ್ಡ ನೀರಾವರಿ ಯೋಜನೆಗಳಲ್ಲಿ ಒಂದಾಗಿದ್ದು ಸರ್ಕಾರಗಳ ದಿವ್ಯ ನಿರ್ಲಕ್ಷದಿಂದ ಆಮೆಗತಿಯಲ್ಲಿ ಸಾಗುತ್ತಿದೆ. ಬಹುಶ ಈ ಯೋಜನೆ ಉತ್ತರ ಕರ್ನಾಟಕ ಭಾಗದಲ್ಲಿ ಇರುವುದರಿಂದ ಮಲತಾಯಿ ಧೋರಣೆ, ತಾರತಮ್ಯಕ್ಕೆ ಒಳಗಾಗಿದೆ ಎನ್ನಬಹುದು. ಇದೇ ರೀತಿ ಮುಂದುವರೆದರೆ ಉತ್ತರಕರ್ನಾಟಕವು ಪ್ರತ್ಯೇಕ ರಾಜ್ಯಕ್ಕಾಗಿ ತೀವ್ರ ಹೋರಾಟ ಮಾಡಲು ಸರಕಾರಗಳೇ ಕಾರಣವಾಗುತ್ತವೆಂದು ಗೋಲಶೆಟ್ಟಿ ಎಚ್ಚರಿಸಿದರು.

ಸಭೆಯಲ್ಲಿ ಸಂತ್ರಸ್ತರು ಹಾಗೂ ರೈತ ಮುಖಂಡರಾದ ಶಂಕ್ರಪ್ಪ ಜೀರಗಾಳ

ಮಾತನಾಡಿ, ಇತ್ತೀಚೆಗೆ ನಿರ್ಮಾಣವಾದ ತೆಲಂಗಾಣ ರಾಜ್ಯವು ಕೇವಲ ಮೂರು ವರ್ಷಗಳಲ್ಲಿ ಬೃಹತ್ ನೀರಾವರಿ ಯೋಜನೆಯೊಂದನ್ನು ಪೂರ್ಣಗೊಳಿಸಿದ್ದು ನಮಗೆ ಮಾದರಿಯಾಗಬೇಕು. ಇಚ್ಛಾಶಕ್ತಿ ಇಲ್ಲದಿದ್ದರೆ ಜನಪ್ರತಿನಿಧಿಗಳು ರಾಜೀನಾಮೆ ನೀಡಬೇಕು ಎಂದರು.

ಮಾಜಿ ಮಂತ್ರಿಗಳಾದ ಎಸ್.ಆರ್.ಪಾಟೀಲ್ ಮಾತನಾಡಿ, ಉತ್ತರ ಕರ್ನಾಟಕದ ಅನೇಕ ನೀರಾವರಿ ಯೋಜನೆಗಳು ನೆನೆಗುದಿಗೆ ಬಿದ್ದಿರುವುದು ವಿಷಾದನೀಯ ಸಂಗತಿ. ನನ್ನ ಅಧಿಕಾರವಧಿಯಲ್ಲಿ ನಾನು ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳ ಹಾಗೂ ಅಭಿವೃದ್ಧಿ ಬಗ್ಗೆ ಸದನದಲ್ಲಿ ಧ್ವನಿ ಎತ್ತುತ್ತ ಬಂದಿದ್ದೇನೆಂದು ತಿಳಿಸಿದರು.

ಬಾಗಲಕೋಟೆ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಅಜಯಕುಮಾರ್ ಸರನಾಯಕ್ ಮಾತನಾಡಿ, ಸಂತ್ರಸ್ಥರ ಹೋರಾಟದಲ್ಲಿ ನಾನು ಸದಾ ಜೊತೆಗಿರುತ್ತೇನೆಂದರು.

ಯುಕೆಪಿ.ಸಂತ್ರಸ್ತರ ಹೋರಾಟ ಸಮಿತಿಯ ಅಧ್ಯಕ್ಷ ಅದೃಶ್ಯಪ್ಪಾ ದೇಸಾಯಿ ಮಾತನಾಡಿ, ಸಂತ್ರಸ್ತರು ಒಂದಾಗಿ ಹೋರಾಡಬೇಕಿದೆ ಹಾಗೂ ಎಲ್ಲ ಪಕ್ಷದ ನಾಯಕರು ಒಂದಾಗಿ ಸಂತ್ರಸ್ತರ ನೋವಿಗೆ ಸ್ಪಂದಿಸಬೇಕೆಂದರು. ಪ್ರಮುಖರಾದ ಎಸ್.ಟಿ.ಪಾಟೀಲ, ವಿರೂಪಾಕ್ಷಯ್ಯ ಹಿರೇಮಠ್ ಮಾತನಾಡಿದರು. ಯುಕೆಪಿ ಸಂತ್ರಸ್ತರ ಹೋರಾಟ ಸಮಿತಿ, ಉತ್ತರ ಕರ್ನಾಟಕ ಸ್ವಾಭಿಮಾನ ಮತ್ತು ಉತ್ತರ ಕರ್ನಾಟಕ ಹೋರಾಟ ಸಮಿತಿ, ರಾಜ್ಯರೈತ ಸಂಘ, ಭಾರತೀಯ ಕಿಸಾನ್ ಸಂಘ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ನಡೆದ ಸಂತ್ರಸ್ತರ ಪೂರ್ವಭಾವಿ ಸಭೆಯಲ್ಲಿ ಪ್ರಮುಖರಾದ ಪ್ರಕಾಶ್ ಅಂತರಗೊಂಡ, ಅಶೋಕ್ ನಾಗಲೋಟಿ, ವಿಠ್ಠಲ್ ತುಮ್ರಮಟ್ಟಿ, ವೆಂಕಪ್ಪ ಗಿಡ್ಡಪ್ಪನವರ, ಗ್ರಾ.ಪಂ. ಅಧ್ಯಕ್ಷ ಗೋಪಾಲ ದಾಸರೆಡ್ಡಿ, ನಿಂಗಪ್ಪ ಹುಗ್ಗಿ, ಚಂದ್ರಶೇಖರ್ ಚಿಪ್ಪಲಕಟ್ಟಿ, ಎಂ.ಎಲ್. ಕೆಂಪಲಿಂಗಣ್ಣವರ, ಮುತ್ತಪ್ಪ ಕೋಮಾರ, ಅಪ್ಪಾಸಾಹೇಬ್ ಲಕ್ಕಮ ಸೇರಿದಂತೆ ನೂರಾರು ಸಂತ್ರಸ್ತರು ಸಭೆಯಲ್ಲಿ ಭಾಗವಹಿಸಿದ್ದರು.

ಕುಡಿಯುವ ನೀರಿನ ಸಮಸ್

ಮಹಿಳೆಯರು ಅಭಿವೃದ್ಧಿ ಹೊಂದಿದರೆ, ದೇಶಅಭಿವೃದ್ಧಿ ಹೊಂದಲು ಸಾಧ್ಯ: ರಾಜಶ್ರೀ ಜೈನಾಪೂರ

ಬೆಳಗಾವಿ: ನಗರದ ಪ್ರತಿಷ್ಠಿತ ಸಂಗೊಳ್ಳಿ ರಾಯಣ್ಣ ಪ್ರಥಮದರ್ಜೆಘಟಕ ಮಹಾವಿದ್ಯಾಲಯದ ಸಭಾಭವನದಲ್ಲಿ ಮಾಚ್ 14, 2024ರಂದು 'ಅಂತಾರಾಷ್ಟ್ರೀಯಮಹಿಳಾ ದಿನಾಚರಣೆ'ಯನ್ನುಆಚರಿಸಲಾಯಿತು. ಉದ್ಘಾಟಕರಾಗಿಆಗಮಿಸಿದ ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರು ಶ್ರೀಮತಿ ರಾಜಶ್ರೀ ಜೈನಾಪೂರಅವರು ಮಾತನಾಡುತ್ತಮಹಿಳೆಯರು ಅಭಿವೃದ್ಧಿ ಹೊಂದಿದರೆ, ದೇಶಅಭಿವೃದ್ಧಿ ಹೊಂದಲು ಸಾಧ್ಯಎಂದುನೆಹರುಅವರ ಮಾತುಗಳನ್ನು ಸ್ಮರಿಸಿಕೊಂಡರು.ಮಹಾವಿದ್ಯಾಲಯದ ಮಹಿಳಾ ಸಬಲೀಕರಣ ಕೋಶ ಹಾಗೂ ಐಕ್ಯೂಎಸಿ ಘಟಕದಆಶ್ರಯದಲ್ಲಿ ಹಮ್ಮಿಕೊಂಡ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ'ಯನ್ನು ಉದ್ಘಾಟಿಸಿ ಅವರುಮಾತುನಾಡಿದರು.ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರಿಗೆ 33%ರಷ್ಟು ಮೀಸಲಾತಿಇರುವುದರಿಂದಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.ದೇಶನಮಗೆ ಏನು ಕೊಡುತ್ತದೆಎನ್ನುವುಕಿಂತದೇಶಕ್ಕಾಗಿ ನಾವು ಏನು ಕೊಡಬೇಕು ಎಂಬುದು ಮುಖ್ಯಎಂದುಎಲ್ಲರನ್ನು ಪ್ರೇರೇಪಿಸಿದರು.ನಿಮ್ಮ ಸಾಧನೆಯ ಮೂಲಕ ನಿಮ್ಮನ್ನುಜಗತ್ತುಗುರ್ತಿಸಬೇಕು ಆ ರೀತಿಯ ಸಾಧನೆ ಮಾಡಿರಿಎಂದರು.ನಿಮ್ಮಲ್ಲಿರುವ ಅಬಲೆ ಎನ್ನುವಗುಣವನ್ನು ಗುರ್ತಿಸಿ ಅದನ್ನು ನಾಶ ಮಾಡಿದೊಡ್ಡಗುರಿಯಿಟ್ಟು ಮುನ್ನುಗ್ಗಿರಿಅದಕ್ಕೆ ನಾವು ಸಹಕರಿಸುತ್ತೇವೆಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಶ್ರೀಮತಿ ರೇಣುಕಾಜಕನೂರ, ಪಿ.ಎಸ್.ಐ. ಡೈರೆಕ್ಟೋರೇಟ್ಆಫ್ ಸಿವಿಲ್ ರೈಟ್ಸ್ಎನ್‌ಫೋರ್ಸಮೆಂಟ್, ಬೆಳಗಾವಿ.ಇವರು ಮಾತನಾಡುತ್ತಾ ಮಹಿಳೆಯರು ಯಾವುದೇ ತೊಂದರೆಯಲ್ಲಿ ಸಿಕ್ಕುಹಾಕಿಕೊಂಡರೆ 112ಕ್ಕೆ ಕರೆ ಮಾಡಿದರೆ ನಿಮಗೆ ಬೇಕಾದ ಸಹಾಯ ಕೇವಲ 20 ನಿಮಿಷದಲ್ಲಿ ಲಭ್ಯವಾಗುತ್ತದೆ.ನಿಮ್ಮ ಮೋಬೈಲ್‌ಟ್ರೆಸ್ ಮಾಡಿ ನೀವು ಇರುವಲ್ಲಿಗೆಟಾಸ್ಕ್ ಫೋರ್ಸ್ ಬೇಗನೆ ತಲುಪುತ್ತದೆಎಂದರು. ಮಹಿಳೆಯರ ಆರ್ಥಿಕತೆಯದೃಷ್ಟಿಯಿಂದ ಸಬಲರಾಗಬೇಕು. ಮೊದಲು ಉದ್ಯೋಗಗಳನ್ನು ಹಿಡಿದುದುಡಿಮೆಯನ್ನು ಪ್ರಾರಂಭಿಸಬೇಕು ಆಗ ಮಾತ್ರ ಮಹಿಳೆಯರಿಗೆ ಸಮಾಜದಲ್ಲಿಗೌರವ ಸ್ಥಾನ ದೊರಕುತ್ತದೆಎಂದರು. ಬೇರೆಬೇರೆ ಕ್ಷೇತ್ರಗಳ ಬಗ್ಗೆ ನಾ ಕಾಣೆ! ಆದರೆ, ಪೊಲೀಸ್ ಪಡೆಯಲ್ಲಿ ಕೆಲಸ ಮಾಡುವ ಮಹಿಳೆಯರು ಮಾತ್ರ 100% ಸ್ವಾತಂತ್ರ್ಯವನ್ನುಅನುಭವಿಸುತ್ತಾರೆಎಂದು ಸಂತೋಷದ ನಗೆ ಚೆಲ್ಲಿದರು.

ಸಭೆಯಅಧ್ಯಕ್ಷತೆಯನ್ನು ವಹಿಸಿಕೊಂಡ ಪ್ರಾಚಾರ್ಯರು ಡಾ.ಶಂಕರಎಸ್. ತೇರದಾಳಅವರುಮಾತುನಾಡುತ್ತಾ ಹೆಣ್ಣನ್ನು ಪ್ರಾಚೀನ ಕಾಲದಿಂದಲೂಗೌರವ ಸ್ಥಾನದಲ್ಲಿಟ್ಟು ಪೂಜಿಸಲಾಗುತ್ತಿದೆಎಂದರು. ಹೆಣ್ಣಿನಲ್ಲಿರುವ ತಾಳ್ಮೆಯ ಗುಣ, ನಮ್ರತೆ, ಸೌಮ್ಯತೆ, ಸಂವೇದನಾಶೀಲತೆ, ಸಹಾನುಭೂತಿ, ಪ್ರೀತಿ–ವಾತ್ಸಲ್ಯ, ಮೃದುತ್ವ ಮತ್ತು ಭಾವನಾತ್ಮಕತೆ–ಎಲ್ಲದರಲ್ಲಿಯೂ ಮೇಲುಪಂಕ್ತಿಯಲ್ಲಿ ಅವಳ ಗುಣಗಳು ಬರುತ್ತವೆಂದು ಮನದುಂಬಿ ಪ್ರಶಂಸಿಸಿದರು.

ಕುಮಾರಿ ಪ್ರಿಯಾಂಕಾತಿಲಗಾರ ಸ್ವಾಗತಗೀತೆಯನ್ನು ಹಾಡಿದರು.ಡಾ. ರಾಧಾ ಬಿ.ಆರ್. ಅತಿಥಿಗಳನ್ನು ಸ್ವಾಗತಿಸಿದರು. ಡಾ. ಸುಮನ ಮುದ್ದಾಪೂರ ಪ್ರಸ್ತಾವಿಕ ನುಡಿಗಳನ್ನಾಡಿದರು.ಭಾಗ್ಯಶ್ರೀ ಹಳೇಮನಿ ವಂದಿಸಿದರು.ಡಾ. ಜ್ಯೋತಿ ಪಾಟೀಲ ಕಾರ್ಯಕ್ರಮವನ್ನು ನಿರೂಪಿಸಿದರು. ವೇದಿಕೆ ಮೇಲೆ ಡಾ.ಆಧಿನಾಥಉಪಾಧ್ಯೆ ಉಪಸ್ಥಿತರಿದ್ದರು.ಬೋಧಕ ಹಾಗೂ ಬೋಧಕೇತರ ಸರ್ವ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: 2024–25 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಪುರುಷ ಹಾಗೂ ಮಹಿಳಾ ರೈತ ಮಕ್ಕಳಿಗೆ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಮೆ.2 ರಿಂದ ಫೆ 28–2025 ರ ವರೆಗೆ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಅಹ್ವಾನಿಸಲಾಗಿದೆ.

ಆಸಕ್ತರ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು, ತರಬೇತಿ ಬಯಸುವ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು, ಸ್ವಂತ ಸಾಗುವಳಿ ಮಾಡುತ್ತಿರಬೇಕು ಹಾಗೂ ಈ ಬಗ್ಗೆ ಪಹಣಿಯನ್ನು (ಖಖಿಅ) ನೀಡುವುದು ಕಡ್ಡಾಯವಾಗಿರುತ್ತದೆ.

ಅರ್ಹತೆಗಳು;

ಸಾಮಾನ್ಯ ವರ್ಗದ ಅಭ್ಯರ್ಥಿಗೆ ಕನಿಷ್ಠ ವಯೋಮಿತಿ 18 ವರ್ಷ ಹಾಗೂ ಗರಿಷ್ಠ 30 ವರ್ಷಗಳು. ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡದ ಅಭ್ಯರ್ಥಿಗಳ ಕನಿಷ್ಠ ವಯೋಮಿತಿ 18 ವರ್ಷಗಳು ಹಾಗೂ ಗರಿಷ್ಠ 33 ವರ್ಷಗಳು ಮತ್ತು ಮಾಜಿ ಸೈನಿಕರಿಗೆ ಕನಿಷ್ಠ ವಯೋಮಿತಿ 33 ವರ್ಷಗಳು ಹಾಗೂ ಗರಿಷ್ಠ 65 ವರ್ಷಗಳಾಗಿರಬೇಕು.

ಅರ್ಜಿಗಳನ್ನು ಮಾ. 30 ರ ವರೆಗೆ ಬೆಳಗಾವಿ (ಜಿ.ಪಂ) ತೋಟಗಾರಿಕೆ ಉಪನಿರ್ದೇಶಕರು ಹಾಗೂ ಬೆಳಗಾವಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಕಛೇರಿಯಲ್ಲಿ ಅಥವಾ ಇಲಾಖೆಯ **website. https://horticulturedir.karnataka.gov.in/** ನಲ್ಲಿ Download ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಏ. 01 ರಂದು ಸಂಜೆ 5.30 ಗಂಟೆಯವರೆಗೆ ಬೆಳಗಾವಿ ಜಿ.ಪಂ ತೋಟಗಾರಿಕೆ ಉಪನಿರ್ದೇಶಕರು ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಬೆಳಗಾವಿ ರಾಣಿ ಚನ್ನಮ್ಮ ವೃತ್ತರವರಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಏ. 06 ರಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ಬೆಳಗಾವಿ ರವರ ಕಛೇರಿಯಲ್ಲಿ ಮುಂಜಾನೆ 11 ಗಂಟೆಗೆ ನೇರವಾಗಿ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8197840336, 8867887191 ಮತ್ತು 9742414741 ಗಳಿಗೆ ಸಂಪರ್ಕಿಸಿಸಹುದು. ಹಾಗೂ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ರವರ ಕಛೇರಿಯಲ್ಲಿ ವಿಚಾರಿಸಬಹುದು ಎಂದು ಬೆಳಗಾವಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಸಿಸಿ ಟಿವಿ ಅಳವಡಿಕೆ & ಸೇವೆ ತರಬೇತಿ

ಬೆಳಗಾವಿ: ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಸಿಸಿ ಟಿವಿ ಅಳವಡಿಕೆ & ಸೇವೆ ಕುರಿತ 13 ದಿನಗಳ ಉಚಿತ ತರಬೇತಿಯು ಏ.5 ರಿಂದ ಆಯೋಜಿಸಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಏಪ್ರಿಲ್ 10 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9380162042, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಬೆಳಗಾವಿ: ಜಿಲ್ಲೆಯಾದ್ಯಂತ ಮಾ.25 ರಿಂದ ಏ.6 ರವರೆಗೆ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳು ನಡೆಯಲಿದ್ದು, ವಾರ್ಷಿಕ ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಆದೇಶ ಹೊರಡಿಸಿರುತ್ತಾರೆ.

ಪರೀಕ್ಷೆಗಳ ಸಮಯದಲ್ಲಿ ಯಾವುದೇ ರೀತಿಯ ಲೋಪದೋಷಗಳಾಗದಂತೆ ಹಾಗೂ ಯಾವುದೇ ರೀತಿಯ ಅವ್ಯವಹಾರಗಳು ಜರುಗದಂತೆ ಕಟ್ಟುನಿಟಿನ ಕ್ರಮ ಜರುಗಿಸುವ ಸಲುವಾಗಿ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ 200ಮೀ. ವ್ಯಾಪ್ತಿಯ ಸುತ್ತಮುತ್ತ ಸಿ.ಆರ್.ಪಿ.ಸಿ 1973 ಕಲಂ 144ರ ಅಡಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿರುತ್ತದೆ. ಒಂದು ವೇಳೆ ಆದೇಶವನ್ನು ಉಲಂಘಿಸಿದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

ಜಿತೊ ಲೇಡಿಜ ವಿಂಗ ವತಿಯಿಂದ ಮಾರ್ಚ 31 ರಂದು ಅಹಿಂಸಾ ರನ್ ಮ್ಯಾರಾಥಾನ

ಬೆಳಗಾವಿ: ಜೈನ ಇಂಟರ್ ನ್ಯಾಷನಲ್ ಟ್ರೆಡ ಆರ್ಗನೈಝೇಶನ ಜಿತೋ ಲೇಡಿಜ ವಿಂಗ ವತಿಯಿಂದ ಇದೇ ಮಾರ್ಚ 31 ರಂದು ಬೆಳಗಾವಿಯಲ್ಲಿ ಅಹಿಂಸಾ ರನ್ ಮ್ಯಾರಾಥಾನ ಓಟವನ್ನು ಆಯೋಜಿಸಲಾಗಿದೆ ಎಂದು ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ ಅವರು ಇಂದಿಲ್ಲಿ ಹೇಳಿದರು.

ಬೆಳಗಾವಿಯ ಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿತೋ ಸಂಸ್ಥೆಯು ಇದೊಂದು ಅಂತರ್‌ರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದ್ದು ವಿಶ್ವದ 28 ದೇಶಗಳಲ್ಲಿ ಹಾಗೂ ಭಾರತದಲ್ಲಿ 69 ವಿಭಾಗಗಳನ್ನು ಹೊಂದಿದ್ದು, ಈ ಎಲ್ಲ ವಿಭಾಗಗಳಲ್ಲಿ ಈ ಅಹಿಂಸಾ ರನ್ನ ನಡೆಸಲಾಗುವುದೆಂದು ಅವರು ಹೇಳಿದರು.

ಕಳೆದ 2023 ರಲ್ಲಿ ಆಯೋಜಿಸಲಾಗಿದ್ದ ಅಹಿಂಸಾ ರನ್ನ ಓಟದಲ್ಲಿ ಒಟ್ಟು 1.16 ಸಾವಿರ ಜನರು ಭಾಗವಹಿಸಿ ಈ ಓಟವನ್ನು ಯಶಸ್ವಿಗೊಳಿಸಿದ್ದರು.

ಈ ವರ್ಷವೂ ಸಹ ಜನರು ಸಹಭಾಗಿತ್ವ ಹೆಚ್ಚಾಗುವ ನಿರೀಕ್ಷೆ ಹೊಂದಲಾಗಿದೆ. ಈ ಮ್ಯಾರಾಥಾನ ಓಟದ ನಿಮಿತ್ಯ ವಿಶ್ವದಲ್ಲೆಡೆ ಅಹಿಂಸೆಯನ್ನು ಪ್ರತಿಪಾದಿಸುವ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಮ್ಯಾರಾಥಾನ ಓಟದ ಸಂಚಾಲಕಿ ಕೀರ್ತಿ ದೊಡ್ಡಣ್ಣವರ ಅವರು ಮಾತನಾಡಿ, ಮಾರ್ಚ 3 ರಂದು ಬೆಳಿಗ್ಗೆ 5:30 ಗಂಟೆಗೆ ಬೆಳಗಾವಿಯ ಕ್ಯಾಂಪ ಮರಾಠಿ ವಿದ್ಯಾನಿಕೇತನ ಶಾಲಾ ಮೈದಾನದಿಂದ ಈ ಓಟ ಆರಂಭವಾಗಲಿದೆ.

ಈ ಓಟದಲ್ಲಿ 3 ಕಿಮಿ, 5 ಕಿಮೀ, ಹಾಗೂ 10 ಕಿಮೀ ಅಂತರದ ಅಹಿಂಸಾ ರನ್ ಮ್ಯಾರಾಥಾನ ಓಟ ನಡೆಯಲಿದೆ. ಈ ಓಟದಲ್ಲಿಒ ಭಾಗವಹಿಸುವ ಪ್ರತಿಯೊಬ್ಬರಿಗೂ ಟಿ ಶರ್ಟ, ಪದಕ, ಪ್ರಮಾಣ ಪತ್ರ, ಹಾಗೂ ಉಪಹಾರದ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಈ ಓಟದಲ್ಲಿ ಭಾಗವಹಿಸುವವರು ತಮ್ಮ ಹೆಸರುಗಳನ್ನು ನೊಂದಾಯಿಸುವುದು ಕಡ್ಡಾಯವಾಗಿದೆ.

ಈ ಮ್ಯಾರಾಥಾನ ಓಟದಿಂದ ಬಂದಂತಹ ಹಣದಲ್ಲಿ ಬೆಳಗಾವಿಯ ಸದಾಶಿವ ನಗರದಲ್ಲಿನ ಸರಕಾರಿ ಕನ್ನಡ ಶಾಲೆ ನಂ26 ಈ ಶಾಲೆಯ ಕಟ್ಟಡ ನಿರ್ಮಾಣಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಬಳಿಸಿಕೊಳ್ಳಲಾಗುವುದೆಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿತೋ ಲೇಡಿಜ ವಿಂಗ ಕಾರ್ಯದರ್ಶಿ ಮಮತಾ ಜೈನ, ಜಿತೋ ಅಧ್ಯಕ್ಷ ವೀರಧವಲ ಉಪಾಧ್ಯೆ, ಜಿತೋ ಯುವ ಘಟಕದ ಅಧ್ಯಕ್ಷ ದೀಪಕ ಸುಬೇದಾರ, ಲೇಡಿಜ ವಿಂಗ ಸಮನ್ವಯಕ ಅಭಯ ಆದಿಮನಿ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ಸಂಗೀತ ಜೀವನಕ್ಕೆ ಶಾಂತಿ ನೆಮ್ಮದಿ ನೀಡುತ್ತದೆ: ನಾರಾಯಣ ಗಣಚಾರಿ

ಸಂಗೀತ ಜೀವನಕ್ಕೆ ಶಾಂತಿ ನೆಮ್ಮದಿ ನೀಡುತ್ತದೆ ಜೊತೆಗೆ ಮಾನಸಿಕ ವಿಕಾಸಕ್ಕೂ ಸಂಗೀತ ಸಹಯೋಗಿ ಎಂದು ವೇಣು ಗ್ರಾಮ ಸಂಸ್ಕೃತಿಕ ಪ್ರತಿಷ್ಠಾನ ಅಧ್ಯಕ್ಷರಾದ ನಾರಾಯಣ ಗಣಾಚಾರಿ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವೇಣು ಗ್ರಾಮ ಸಾಂಸ್ಕೃತಿಕ ಪ್ರತಿಷ್ಠಾನ ಸಂಯುಕ್ತ ಆಶ್ರಯದಲ್ಲಿ ಇಂದು ಕೆಎಲ್ಇ ಸಂಗೀತ ವಿಭಾಗದ ಸಭಾ ಗ್ರಹದಲ್ಲಿ ನಡೆದ ಹಿಂದುಸ್ತಾನಿ ಸಂಗೀತ ಸಂಜೆ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ನಾರಾಯಣ ಗಣಾಚಾರಿ ಅವರು ಸಂಗೀತ ಮಾನಸಿಕ ಸದೃಢತೆಗೆ ಮತ್ತು ಮಾನಸಿಕ ಸಂತುಲನಕ್ಕೆ, ಹೇಳಿ ಮಾಡಿಸಿದ ಔಷಧಿ ಎಂದರು.

ಸಂಗೀತ ಎಲ್ಲ ರೋಗಗಳಿಗೆ ಮದ್ದು ಆದ್ದರಿಂದ ಎಲ್ಲರೂ ಸಂಗೀತವನ್ನು ಕೇಳುವ ಹವ್ಯಾಸವನ್ನು ಹೆಚ್ಚು ಬೆಳೆಸಿಕೊಳ್ಳಬೇಕೆಂದು ಕೇಳಿಕೊಂಡರು.

ಕಾರ್ಯಕ್ರಮದ ಉದ್ಘಾಟನೆಯನ್ನು ಕೆಎಲ್ಇ ಸಂಗೀತ ವಿಭಾಗದ ಮುಖ್ಯಸ್ಥರಾದ ರಾಜಾರಾಮ್ ಅಂಬರಡೆಕರ್ ಅವರು ನೆರವೇರಿಸಿದರು. ಸಂಗೀತ ಕಾರ್ಯಕ್ರಮವನ್ನು ನೀಡಲು ಆಗಮಿಸಿದ್ದ ಧಾರವಾಡದ ರಾಧಾ ದೇಸಾಯಿ ಮತ್ತು ಕಿತ್ತೂರಿನ ರಜತ್ ಕುಲಕರ್ಣಿ ಅವರು ನೆರೆದಂತ ಸಂಗೀತ ರಸಿಕರನ್ನು ಸಂಗೀತ ಲೋಕದಲ್ಲಿ ತೇಲಿಸಿದರು. ಡಾ। ಸುನೀತಾ ಪಾಟೀಲ್ ಕಾರ್ಯಕ್ರಮದಲ್ಲಿ ಸ್ವಾಗತಿಸಿದರೆ ಪ್ರಮೋದ್ ಶೇಟ್ ಅವರು ವಂದಿಸಿದರು.

ಬೆನ್ನುಹುರಿ ಶಸ್ತ್ರಚಿಕಿತ್ಸಕರ ಭೇಟಿ

ಬೆಳಗಾವಿ: ಕೆಎಲ್ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದಲ್ಲಿ ಬೆನ್ನುಹುರಿ ತಪಾಸಣೆಯನ್ನು ಶನಿವಾರ ದಿ. 16 ಮಾರ್ಚ 2024 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಏರ್ಪಡಿಸಲಾಗಿದೆ. ಪುಣೆಯ ಬೆನ್ನುಹುರಿ ಶಸ್ತ್ರಚಿಕಿತ್ಸಕರಾದ ಡಾ. ಸಂಜಯ ಪಾಟೀಲ ಅವರು ಆಗಮಿಸಲಿದ್ದು, ಬೆನ್ನುಹುರಿ ತೊಂದರೆಯಿಂದ ಬಳಲುತ್ತಿರುವವರನ್ನು ತಪಾಸಿಸಿ ಸೂಕ್ತ ಸಲಹೆ ಮತ್ತು ಶಸ್ತ್ರಚಿಕಿತ್ಸೆ ಕುರಿತು ಪರಿಹಾರ ತಿಳಿಸಲಿದ್ದಾರೆ.

ಈ ಭೇಟಿಯ ಸದಪಯೋಗವನ್ನು ಪಡೆದುಕೊಳ್ಳುವಂತೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕೆಎಲ್ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಜನಸಂಪರ್ಕ ವಿಭಾಗ ಅಥವಾ ದೂ. 2473777, (ವಿಸ್ತೀರ್ಣ: 1116 \ 1117), ಇಲ್ಲಿಗೆ ಸಂಪರ್ಕಿಸಲು ಅರಿಕೆ.

ಲೋಕಸಭಾಕ್ಷೇತ್ರ ಬಿಜೆಪಿ ಓಬಿಸಿ ಮೋರ್ಚಾ ಸಾಮಾಜಿಕ ಸಮ್ಮೇಳನ

ಬೆಳಗಾವಿ: ಬಿಜೆಪಿ ಬೆಳಗಾವಿ ಗ್ರಾಮಾಂತರ ಜಿಲ್ಲೆ ಹಾಗೂ ಮಹಾನಗರ ಜಿಲ್ಲೆಯ ವತಿಯಿಂದ ಆಯೋಜಿಸಿದ್ದ ಬೆಳಗಾವಿ ಲೋಕಸಭಾ ಬಿಜೆಪಿ ಓಬಿಸಿ ಮೋರ್ಚಾ ಸಾಮಾಜಿಕ ಸಮ್ಮೇಳನ ಕಾರ್ಯಕ್ರಮವನ್ನು ರಾಜ್ಯಾಧ್ಯಕ್ಷರಾದ ಆರ್. ರಘುಕೌಟಿಲ್ಯ ಅವರು ಉದ್ಘಾಟಿಸಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂ